ಸಂಪುಟ : 10 ಸಂಚಿಕೆ: 96 ಪುಟ : 4+2 ಬೆಲೆ: 3.00 ಶುಕ್ರವಾರ ಮೇ 16 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 96 Pages : 4+2 Price : 3.00 Friday May 16 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ನರಗುಂದದಲ್ಲಿ ಈ ಕೆಳಕಂಡ ವೃತ್ತಿಗಳಲ್ಲಿ ಲಭ್ಯವಿರುವ ಕೋರ್ಸ್ 2025-26ನೇ ಸಾಲಿನ ಪ್ರವೇಶಕ್ಕೆ ಇಲಾಖೆಯ Online Address:www.cite.karnataka.gov.in ಮೂಲಕ ಮೇ 9 ರಿಂದ ಮೇ 28 ರವರೆಗೆ ಅರ್ಜಿ ಸಲ್ಲಿಸಬಹುದು. ಅಥವಾ ಸಂಸ್ಥೆಯ ಕಚೇರಿಯಲ್ಲಿ ಖುದ್ದಾಗಿ ಬಂದು ಅರ್ಜಿ ಸಲ್ಲಿಸಬಹುದಾಗಿದೆ.

ಎಲೆಕ್ಟ್ರಿಷಿಯನ್, ಇ.ಎಮ್, ಫಿಟ್ಟರ್, ರೆಫ್ರೀಜರೇಷನ್ ಆ್ಯಂಡ್ ಎರ್ ಕಂಡಿಷನಿಂಗ್, ಕಂಪ್ಯೂಟರ್ ಆಪ್‌ರೇಟರ್ & ಪ್ರೋಗ್ರಾಮಿಂಗ್ ಅಸಿಸ್ಟಂಟ್, ಎಲೆಕ್ಟ್ರಿಷಿಯನ್ ಫಿಟ್ಟರ್ ವೆಲ್ಡರ್ ಎಂ.ಈ.ವಿ. ಸಿ.ಎನ್.ಸಿ. ಇಂಡಸ್ಟ್ರಿಯಲ್ ರೋಬೋಟಿಕ್ಸ್ & ಡಿಜಿಟಲ್ ಮ್ಯಾನುಫಾಕ್ಚರಿಂಗ್. ವರ್ಚುವಲ್ ಅನಲಾಯಿಸಸ್ ಐಂಡ್ ಡಿಸೈನರ್ ಇಂಜನಿಯರಿಂಗ್ ಡಿಸೈನ್ ಟೆಕ್ನಿಷಿಯನ್,ಮ್ಯಾನ್ಯುಫಾಕ್ಚರಿಂಗ್ ಪ್ರೋಸೆಸ್ ಕಂಟ್ರೋಲ್ & ಆಟೋಮೇಷನ್

ಹೆಚ್ಚಿನ ಮಾಹಿತಿಗಾಗಿ ಹಾಗು ನೇರವಾಗಿ ಸಂಸ್ಥೆಯಲ್ಲಿ ಅರ್ಜಿ ಸಲ್ಲಿಸಲು ಸಂಪರ್ಕಿಸಬೇಕಾದ ವಿಳಾಸ:-ಪ್ರಾಚಾರ್ಯರು, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ನರಗುಂದ. ಮೊಬೈಲ್ ನಂ: 9739771576 9449654942-8951618590-8277463555

## ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿಗೆ ಶಿರಹಟ್ಟಿ ತಾಲೂಕಿನಲ್ಲಿ ನಡೆಯುತ್ತಿರುವ ಸಮಾಜ ಕಲ್ಯಾಣ ಇಲಾಖೆಯ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆ ಶಿಗ್ಲಿ ಇಲ್ಲಿನ 1 ರಿಂದ 5ನೇ ತರಗತಿಗಳಲ್ಲಿ ಖಾಲಿ ಇರುವ ಹಾಗೂ ಪರಿಶಿಷ್ಟ ಪಂಗಡದ ಮಹರ್ಷಿ ಶ್ರೀ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ, ನವೇಭಾವನೂರ ಇಲ್ಲಿಗೆ 1 ರಿಂದ 6ನೇ ತರಗತಿಗಳಲ್ಲಿ ಖಾಲಿ ಇರುವ ಸ್ಥಳಗಳಿಗೆ ಅರ್ಹ ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗದ, ಇತರೇ ಹಿಂದುಳಿದ ವರ್ಗಗಳ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಂದ ವಸತಿ ಶಾಲೆಗಳ ಪ್ರವೇಶಕ್ಕೆ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಪ್ರವೇಶ ಬಯಸುವ ವಿದ್ಯಾರ್ಥಿ / ವಿದ್ಯಾರ್ಥಿನಿಯರು ಕಚೇರಿ ಸಮಯದಲ್ಲಿ ಕಾರ್ಯಾಲಯದಿಂದ ▸▸ 3ನೇ ಪುಟಕ್ಕೆ

## ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಆಸ್ತಿಗಳ ಮಾಲೀಕರಿಗೆ / ಅನುಭೋಗದಾರರಿಗೆ ತಿಳಿಸುವುದೇನೆಂದರೆ, ಸರಕಾರದ ಆದೇಶದನ್ವಯ ರಾಜ್ಯದ ನಗರ ಸ್ಥಳೀಯ ಸಂಸ್ಥೆಯಾದ ಗದಗ-ಬೆಟಗೇರಿ ನಗರಸಭೆ ಆರ್ಥಿಕ ವರ್ಷದ ಪ್ರಾರಂಭದ 30 ದಿನಗಳಲ್ಲಿ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿ ಮಾಡಿದಲ್ಲಿ ಶೇ 5 ರಷ್ಟು ರಿಯಾಯತಿ ನೀಡಲು ಕಲ್ಪಿಸಿರುವ ಅವಕಾಶದ ಅವಧಿಯನ್ನು ಜೂನ್ 30 ರವರೆಗೆ ವಿಸ್ತರಿಸಲಾಗಿದೆ.

ಎಲ್ಲ ಆಸ್ತಿ ಮಾಲೀಕರು ತಮ್ಮ ತಮ್ಮ ಆಸ್ತಿಯ ತೆರಿಗೆಯನ್ನು ಭರಣಾ ಮಾಡಲು ಮತ್ತು ಇದನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತುರ್ತು ಪರಿಸ್ಥಿತಿಯ ನಿರ್ವಹಣೆಗೆ ಅಣುಕು ಪ್ರದರ್ಶನ ಸಹಕಾರಿ: ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಯಶಸ್ವಿಯಾದ ಅಣಕು ಪ್ರದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ವೈಮಾನಿಕ ದಾಳಿ ಎದುರಾದಾಗ ಸ್ಥಳೀಯ ಜನರು ಭಯಭೀತರಾಗದೇ ಪರಿಸ್ಥಿತಿಯನ್ನು ಹೇಗೆ ಎದುರಿಸಬೇಕೆಂದು ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಅಣಕು ಪ್ರದರ್ಶನ ಕೈಗೊಳಲಾಯಿತು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ವಿಡಿಎಸ್ ಟಿ ಮೈದಾನದಲ್ಲಿ ಗುರುವಾರ ನಡೆದ ಅಣುಕು ಪ್ರದರ್ಶನದ ನಂತರ ಮಾತಾನಾಡಿದ ಅವರು, ಯುದ್ಧದಂತಹ ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಸರ್ಕಾರ ಹೇಗೆ ಕೆಲಸ ನಿರ್ವಹಿಸುತ್ತದೆ ಎಂದು ಅವರು ತಿಳಿಸಿದರು.



ನಗರದಲ್ಲಿ ವೈಮಾನಿಕ ದಾಳಿಯಾದಾಗ ಅದಕ್ಕೆ ಇಲಾಖೆಯ ಅಧಕಾರಿಗಳು ಹೇಗೆ ಕಾರ್ಯಾಚರಣೆ ನಡೆಸಿ, ಪರಿಹಾರ ಕಂಡುಕೊಳ್ಳುತ್ತೇವೆ ಎನ್ನುವುದನ್ನು ತಿಳಿಸುವ ಅಣಕು ಪ್ರದರ್ಶನ ಇದಾಗಿದ್ದು, ಬಾಂಬ್ ಬಿದ್ದಿದೆ ಎಂದು ಮಾಹಿತಿ ತಿಳಿದ ಕೂಡಲೇ ಬಾಂಬ್ ಸ್ಕ್ವಾಡ್ ತಕ್ಷಣ ಹೋಗಿ ಅಲ್ಲಿನ ಪರಿಸ್ಥಿತಿ ಅರಿತು ಇನ್ನೂ ಸ್ಫೋಟಗೊಳ್ಳದ ಬಾಂಬ್‌ಗಳನ್ನು ನಿಷ್ಕ್ರಿಯಗೊಳಿಸಿದರು, ಪೊಲೀಸ್, ಅಗ್ನಿಶಾಮಕ ದಳ, ಆಂಬ್ಯುಲೆನ್ಸ್ ಸ್ವಯಂಸೇವಕರು ಬಂದು ಭಯಭೀತರಾದ ಜನರನ್ನು ಸುರಕ್ಷಿತ ಸ್ಥಳಕ್ಕೆ ಕರೆದೊಯ್ದುರು, ಗಾಯಾಳುಗಳನ್ನು ಆಸ್ಪತ್ರೆಗೆ ಸ್ಥಳಾಂತರಗೊಳಿಸಲಾಯಿತು, ಪ್ರಥಮ ಚಿಕಿತ್ಸೆಯ ಕ್ಯಾಂಪ್‌ಗಳನ್ನು ಪ್ರಾರಂಭಿಸಲಾಯಿತಲ್ಲದೆ, ಪರಿಸ್ಥಿತಿಗನುಗುಣವಾಗಿ ಕಾರ್ಯಗಳನ್ನು ನಿಭಾಯಿಸುವ ಬಗ್ಗೆ ಪ್ರಾತ್ಯಕ್ಷಿಕೆಯನ್ನು ಕೈಗೊಳ್ಳಲಾಯಿತು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.




ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಅಣಕು ಪ್ರದರ್ಶನದ ಮೂಲಕ ಯಾವುದಾದರೂ ತುರ್ತು ಸ್ಥಿತಿ ಎದುರಾದಾಗ ಅದನ್ನು ಎದುರಿಸಲು ಹೇಗೆ ಸಿದ್ಧರಾಗಿರಬೇಕು ಎಂದು ಜನರಲ್ಲಿ ಜಾಗೃತಿ ಮೂಡಿಸಲಾಯಿತು. ಅಣಕು ಪ್ರದರ್ಶನದಲ್ಲಿ 22 ಇಲಾಖೆಗಳು ಸೇರಿದಂತೆ ಎನ್‌ಸಿಸಿ, ಎನ್‌ಎಸ್‌ಎಸ್, ಮಾಜಿ ಸೈನಿಕರು, ಸ್ಕೌಟ್ಸ್-ಗೈಡ್ ಒಳಗೊಂಡು 300 ಜನ ಭಾಗವಹಿಸಿ, ಅಲರ್ಟ ಮೇಸೆಜ್ ಬಂದ ತಕ್ಷಣ ಯಾವ ತಂಡ ಯಾವ ಕೆಲಸವನ್ನು ಮಾಡಬೇಕು ಎನ್ನುವ ಜವಾಬ್ದಾರಿಗಳನ್ನು ಈ ಮೂಲಕ ತಿಳಿಸಲಾಯಿತು. ಅಣುಕು ಪ್ರದರ್ಶನದಲ್ಲಿ 18 ತಂಡಗಳು ಭಾಗವಹಿಸಿದ್ದವು ಎಂದು ತಿಳಿಸಿದರು. ರಾಜ್ಯ ವಿಪತ್ತು ಪರಿಹಾರ ತಂಡ, ಎಸ್ಕಾಂ ಎನ್‌ಸಿಸಿ, ಎನ್‌ಎಸ್‌ಎಸ್, ಸ್ಕೌಟ್ಸ್ ಗೈಡ್ಸ್ ತಂಡದವರು ಪರಿಸ್ಥಿತಿ ನಿರ್ವಹಣೆಯಲ್ಲಿ ಪಾಲ್ಗೊಂಡರು. ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಹಿರಿಯ ಪೊಲೀಸ್ ಅಧಿಕಾರಿಗಳು, ಹೆಸ್ಕಾಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿದ್ಯಾರ್ಥಿಗಳು ಸಾರ್ವಜನಿಕರು ಹಾಜರಿದ್ದರು.

### ನಿಜವಲ್ಲ, ಅಣಕು ಪ್ರದರ್ಶನವಷ್ಟೇ

ವೈಮಾನಿಕ ದಾಳಿಯಿಂದ ನಗರದ ಮನೆಗಳಿಗೆ ಬೆಂಕಿ ಹೊತ್ತಿ ಉರಿಯಿತು. ಮನೆಯಲ್ಲಿದ್ದ ಜನರು ಬೆಂಕಿಯಿಂದ ಗಾಯಗೊಂಡರು, ದಾಳಿಯಿಂದ ಸುತ್ತಮುತ್ತಲಿನ ಜನರು, ಮಕ್ಕಳು ಭಯಭೀತರಾದರು, ಕೆಲವರಿಗೆ ಗಂಭೀರ ಗಾಯಗಳಾಗಿ ಸ್ಥಳದಲ್ಲಿಯೇ ಮೂರ್ಛೆ ಹೋದರು. ವೈಮಾನಿಕ ದಾಳಿಯ ಮಾಹಿತಿ ತಿಳಿದ ತಕ್ಷಣ ಅಗ್ನಿಶಾಮಕ ದಳ ದೌಡಾಯಿಸಿ ಅಗ್ನಿ ನಂದಿಸುವ ಕೆಲಸ ಪ್ರಾರಂಭಿಸಿದರು. ಅಗ್ನಿ ಸಂಭವಿಸಿದ ಮನೆಯೊಳಗಿದ್ದ ಜನರನ್ನು ಮನೆಯೊಳಗೆ ಹೋಗಿ ಹೊರತಂದು ಸಂರಕ್ಷಿಸಿದರು, ತುರ್ತು ಪರಿಸ್ಥಿತಿ ಸಹಾಯವಾಣಿಯನ್ನು ಪ್ರಾರಂಭಿಸಿದರು. ಆಂಬ್ಯುಲೆನ್ಸ್‌ಗಳು ಬಂದ ತಕ್ಷಣ ಸ್ಥಳದಲ್ಲಿದ್ದ ಪೊಲೀಸ್ ಸಹಾಯದಿಂದ ಗಾಯಾಳುಗಳನ್ನು ಆಸ್ಪತ್ರೆಗೆ ಸ್ಥಳಾಂತರಗೊಳಿಸುವ ಕಾರ್ಯ ಪ್ರಾರಂಭಿಸಿದರು.

### ಕಾನೂನು ಅರಿವು ಶಿಬಿರ ಕಾರ್ಯಕ್ರಮದಲ್ಲಿ ಸಮುದಾಯ ಸಂಘಟನಾಧಿಕಾರಿ ಪ್ರಹ್ಲಾದ್ ಅಭಿಮತ

# ಬೀದಿ ಬದಿ ವ್ಯಾಪಾರಸ್ಥರಿಗೆ ಕಾನೂನು ಅರಿವು ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಬೀದಿ ನಾಟಕ, ಜಾನಪದ ಹಾಡುಗಳ ಮೂಲಕ ಕಾನೂನು ಅರಿವು ಮೂಡಿಸುವ ಕಾರ್ಯಕ್ರಮ ಮಾಡುತ್ತಿದ್ದೇವೆ. ಮುಂದಿನ ದಿನಗಳಲ್ಲಿ ಇನ್ನೂ ಹಲವು ಭಾಗಗಳಲ್ಲಿ ಕಾರ್ಯಕ್ರಮ ಆಯೋಜಿಸಲು ತಿರ್ಮಾನಿಸಲಾಗಿದೆ. ವ್ಯಾಪಾರಿಗಳು ತಮ್ಮ ವ್ಯಾಪಾರಕ್ಕಾಗಿ ಬ್ಯಾಂಕ್‌ನಲ್ಲಿ ಸಾಲ ಸೌಲಭ್ಯ ಪಡೆಯಬೇಕು. ಬೀದಿ ಬದಿ ವ್ಯಾಪಾರಸ್ಥರಿಗೆ ಕಾನೂನಿನ ಅರಿವು ಇರುವುದು ಅತೀ ಅಗತ್ಯವಿದೆ ಎಂದು ಸಮುದಾಯ ಸಂಘಟನಾಧಿಕಾರಿ ಪ್ರಹ್ಲಾದ್ ತಿಳಿಸಿದರು.

ನಗರದ ಗ್ರೇನ್ ಮಾರುಕಟ್ಟೆಯಲ್ಲಿ ಗುರುವಾರ ಕೌಶಲ್ಯಾಭಿವೃದ್ಧಿ, ಉದ್ಯಮಶಿಲತೆ, ಜೀವನೋಪಾಯ ಇಲಾಖೆ, ಗದಗ-ಬೆಟಗೇರಿ ನಗರಸಭೆ, ಪ್ರಧಾನ ಮಂತ್ರಿ ಬೀದಿ-ಬದಿ ವ್ಯಾಪಾರಿಗಳ ಆತ್ಮನಿರ್ಭರ ಯೋಜನೆ, ಪಿ.ಎಂ ಸ್ವನಿಧಿ, 'ಸಮೃದ್ಧ ಯೋಜನೆ ಉತ್ಸವ ಕಾರ್ಯಕ್ರಮ'ದ ಅಂಗವಾಗಿ ಬೀದಿ-ಬದಿ ವ್ಯಾಪಾರಸ್ಥರಿಗೆ ಉತ್ತೇಜನ ನೀಡಲು ಕಾನೂನು ಅರಿವು ಶಿಬಿರ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.



ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿ ಬಸವರಾಜ ಮಲ್ಲೂರ ಮಾತನಾಡಿ, ಕಾನೂನು ಪಾಲಿಸಲು ಸಾಕಷ್ಟು ಅಡೆ-ತಡೆ ಇದ್ದರೂ ಅದನ್ನು ಅನುಷ್ಠಾನಕ್ಕೆ ತರಲು ಪ್ರಾಮಾಣಿಕ ಪ್ರಯತ್ನ ಮಾಡಿದ್ದೇವೆ. ಬೀದಿ-ಬದಿ ವ್ಯಾಪಾರಸ್ಥರಿಗೆ ತೊಂದರೆಯಾದರೆ ಯಾವ ಅಧಿಕಾರಿಯನ್ನು ಸಂಪರ್ಕಿಸಬೇಕು ಎನ್ನುವ ಅರಿವು ನಿಮ್ಮಲ್ಲಿ ಇರಬೇಕು. ವ್ಯಾಪಾರಸ್ಥರು ಮೊದಲು ಸಂಘಟಿತರಾಗಬೇಕು ಎಂದು ಕರೆ ನೀಡಿದರು.

ಪ್ರಾಸ್ತಾವಿಕವಾಗಿ ಕರ್ನಾಟಕ ರಾಜ್ಯ ಬೀದಿ ಬದಿ ವ್ಯಾಪಾರಸ್ಥರ ಉಪಾಧ್ಯಕ್ಷ ಭಾಷಾಸಾಬ ಮಲ್ಲಸಮುದ್ರ ಮಾತನಾಡಿ, ಮನಮೋಹನ್‌ಸಿಂಗ್ ಪ್ರಧಾನ ಮಂತ್ರಿ ಇರುವಾಗ ಬೀದಿ ವ್ಯಾಪಾರಸ್ಥರ ಸಂರಕ್ಷಣೆಗಾಗಿ 2014ರಲ್ಲಿ ಕಾನೂನನ್ನು ಜಾರಿಗೆ ತಂದರು. ಬೀದಿ ವ್ಯಾಪಾರಸ್ಥರು ಮಹಾನಗರ, ನಗರ, ಪಟ್ಟಣ ಮಾರುಕಟ್ಟೆಯಲ್ಲಿ ಸ್ಥಳೀಯ ಪೌರರ ಅಧ್ಯಕ್ಷತೆಯಲ್ಲಿ ಬೀದಿ-ಬದಿ ವ್ಯಾಪಾರಸ್ಥರಿಂದ 10 ಜನ ಸದಸ್ಯರನ್ನು ಆಯ್ಕೆ ಮಾಡಲಾಗುತ್ತದೆ. ಬೀದಿ ವ್ಯಾಪಾರಸ್ಥರು ಆರ್ಥಿಕವಾಗಿ, ಸಾಮಾಜಿಕವಾಗಿ ಸದೃಢವಾಗಲು ಲೀಡ್ ಬ್ಯಾಂಕ್ ಮ್ಯಾನೇಜರ ಅವರನ್ನು ಹಾಗೂ ಆರೋಗ್ಯಕ್ಕಾಗಿ ಆರೋಗ್ಯ ಇಲಾಖೆಯ ಅಧಿಕಾರಿಯನ್ನು ಆಯ್ಕೆ ಮಾಡಲಾಗುತ್ತದೆ ಎಂದು ತಿಳುವಳಿಕೆ ನೀಡಿದರು.

ಗುರುರಾಜ ಬಿ.ಗೌರಿ ಮಾತನಾಡಿ, 3 ಲಕ್ಷಕ್ಕಿಂತ ಕಡಿಮೆ ಆದಾಯ ಹೊಂದಿದವರಿಗೆ ಉಚಿತ ಕಾನೂನು ಸೇವೆಯನ್ನು ನೀಡಲಾಗುತ್ತದೆ. ಕಾನೂನು ಸಮಸ್ಯೆ ಇದ್ದೂ ಕೂಡ ವ್ಯಾಪಾರಸ್ಥರ ಪರವಾಗಿ ನಾವು ಉಚಿತವಾಗಿ ಕಾನೂನು ಹೋರಾಟ ಮಾಡುತ್ತೇವೆ. ಕಾರ್ಮಿಕರಿಗಾಗಿ ಎಲ್.ಐ.ಸಿ ರೀತಿ ಒಂದು ಯೋಜನೆ ಮಾಡಲು ತಿರ್ಮಾನಿಸಲಾಗಿದೆ. ನಗರಸಭೆ ಅಧಿಕಾರಿಗಳು ಈ ಬಗ್ಗೆ ಗಮನ ಹರಿಸಿ ವ್ಯಾಪಾರಸ್ಥರ ಹಿತ ಕಾಪಾಡಬೇಕು ಎಂದು ಸಲಹೆ ನೀಡಿದರು.

## ಯೋಧರಿಗಾಗಿ ರಕ್ತದಾನ ಶಿಬಿರ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ 'ನಮಗಾಗಿ ಗಡಿಯಲ್ಲಿ ರಕ್ತ ಹರಿಸುವ ಯೋಧರಿಗಾಗಿ ನಾವು ಮಾಡೋಣ ರಕ್ತದಾನ' ಘೋಷವಾಕ್ಯದಡಿ ಯೋಧರಿಗಾಗಿ ರಕ್ತದಾನ ಶಿಬಿರವನ್ನು ಮೇ 17ರಂದು ಬೆಳಿಗ್ಗೆ 9ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ದೇಶದ ಗಡಿಯಲ್ಲಿ ನಮ್ಮನ್ನು ಕಾಯಲು ಬಲಿದಾನಗೈಯುತ್ತಿರುವ ಭಾರತೀಯ ಸೇನೆ ಯೋಧರಿಗಾಗಿ ರಕ್ತದಾನ ಶಿಬಿರ ಏರ್ಪಡಿಸಲಾಗಿದೆ. ಶಿಬಿರದಲ್ಲಿ ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು,



ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು, ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು, ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದ್ದಾರೆ.

## ಕಮ್ಯೂನಿಟಿ ಮೊಬಲೈಜರ್ ಹುದ್ದೆಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಗಜೇಂದ್ರಗಡ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಅಡಿಯಲ್ಲಿ ಐಇಸಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ನಲ್ಮ-ಡೇ ಯೋಜನೆಯ ಸ್ವ ಸಹಾಯ ಸದಸ್ಯರುಗಳನ್ನು ಕಮ್ಯೂನಿಟಿ ಮೊಬಲೈಜರ್ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದೆ, ಕನಿಷ್ಠ ಎಸ್‌ಎಸ್‌ಎಲ್‌ಸಿ/ 10 th pass , ಕನ್ನಡ ಭಾಷೆ ಓದು ಬರಹ ಜ್ಞಾನ ಹೊಂದಿರಬೇಕು. 18-45 ವರ್ಷ ವಯೋಮಾನದವರಾಗಿರಬೇಕು. ಆಸಕ್ತಿ ಇರುವ ಅಭ್ಯರ್ಥಿಗಳು ತಮ್ಮ ಎಲ್ಲಾ ಅಗತ್ಯ ದಾಖಲಾತಿಯೊಂದಿಗೆ ಮೇ 31 ರ ಸಂಜೆ 5 ಗಂಟೆಯೊಳಗಾಗಿ ನಿಗಧಿತ ಅರ್ಜಿ ನಮೂನೆ ಪಡೆದು ಮಾಹಿತಿಯನ್ನು ಭರ್ತಿ ಮಾಡಿ ಖುದ್ದಾಗಿ ಮುಖ್ಯಾಧಿಕಾರಿಗಳು ಪುರಸಭೆ ಗಜೇಂದ್ರಗಡರವರ ವಿಳಾಸಕ್ಕೆ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು. ಅರ್ಜಿ ಹಾಗೂ ಹೆಚ್ಚಿನ ವಿವರಗಳಿಗೆ ಗಜೇಂದ್ರಗಡ ಪುರಸಭೆಯ ಆರೋಗ್ಯ ಶಾಖೆಯನ್ನು ಸಂಪರ್ಕಿಸಬಹುದಾಗಿದೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರೋಣ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಅಡಿಯಲ್ಲಿ ಐಇಸಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ನಲ್ಮ-ಡೇ ಯೋಜನೆಯ ಸ್ವ ಸಹಾಯ ಸದಸ್ಯರುಗಳನ್ನು ಕಮ್ಯೂನಿಟಿ ಮೊಬಲೈಜರ್ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದೆ.

ವಿದ್ಯಾರ್ಹತೆ : ▸▸ 3ನೇ ಪುಟಕ್ಕೆ

## ಸಮಾಜದಲ್ಲಿ ಸುಂದರ ಜೀವನ ನಿರ್ವಹಿಸಿ



■ ವಿಜಯಸಾಕ್ಷಿ ಸುದ್ದಿ, ರೋಣ

ನವ ದಂಪತಿಗಳು ಸಮಾಜದಲ್ಲಿ ಸುಂದರ ಜೀವನವನ್ನು ನಿರ್ವಹಿಸಬೇಕು. ಅಂದಾಗ ಮಾತ್ರ ಕುಟುಂಬ ಸದೃಢತೆಯಿಂದ ಇರಲು ಸಾಧ್ಯ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಗುರುವಾರ ಕೊತಬಾಳ ಗ್ರಾಮದ ಅಡವಿಸಿದ್ದೇಶ್ವರ ಶ್ರೀಮಠದ ಜಾತ್ರಾ ಮಹೋತ್ಸವದ ನಿಮಿತ್ತ ಜರುಗಿದ 18 ಜೋಡಿ ಸರ್ವಧರ್ಮ ಸಾಮೂಹಿಕ ವಿವಾಹ ಕಾರ್ಯಕ್ರವನ್ನು ಉದ್ಘಾಟಿಸಿ ಮಾತನಾಡಿದರು.

ನವ ದಂಪತಿಗಳು ತಂದೆ-ತಾಯಿಗಳ ಬಗ್ಗೆ ಪ್ರೀತಿಯನ್ನು ಹೊಂದಬೇಕು. ಜೊತೆಗೆ ಹಿರಿಯರನ್ನು ಗೌರವಿಸುತ್ತ, ಧಾರ್ಮಿಕ ಪದ್ಧತಿಯಲ್ಲಿ ಬದುಕನ್ನು ಕಟ್ಟಿಕೊಳ್ಳಬೇಕು. ತಮಗೆ ಜನಿಸುವ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವಲ್ಲಿ ಪ್ರಯತ್ನಿಸಬೇಕು. ಒಬ್ಬರಿಗೊಬ್ಬರು ಅರಿತುಕೊಂಡು ಸಹಬಾಳ್ವೆ ನಡೆಸಬೇಕು ಎಂದರು.

ಬಸವಲಿಂಗ ಶ್ರೀಗಳು, ಬಸವಲಿಂಗೇಶ್ವರ ಶ್ರೀಗಳು, ಗುರುಪಾದ ಶ್ರೀಗಳು, ಸಿದ್ದಲಿಂಗ ಶ್ರೀಗಳು, ಒಪ್ಪತ್ತೇಶ್ವರ ಶ್ರೀಗಳು, ಮಹಾದೇವ ಶ್ರೀಗಳು, ಶಿವಪೂಜಾ ಶ್ರೀಗಳು, ಗುರು ಸಿದ್ದೇಶ್ವರ ಶ್ರೀಗಳು, ಕೈಲಾಸಲಿಂಗ ಶ್ರೀಗಳು, ವೀರೇಶ್ವರ ಶ್ರೀಗಳು, ಗಂಗಾಧರ ಶ್ರೀಗಳು ಸೇರಿದಂತೆ ವಿವಿಧ ಮಠಾಧೀಶರು ಸಾನ್ನಿಧ್ಯ ವಹಿಸಿದ್ದರು. ಬಸವರಾಜ ನಲಗುಂದ, ಮುತ್ತಣ್ಣ ಸಂಗಳದ, ಅಭಿಷೇಕ ನವಲಗುಂದ, ಡಾ. ಸಂಜಯ ರಡ್ಡೇರ, ತಾ.ಪಂ ಮಾಜಿ ಸದಸ್ಯ ಸಿದ್ದಣ್ಣ ಯಾಳಗಿ, ಗ್ರಾ.ಪಂ ಸದಸ್ಯ ವೀರಣ್ಣ ಯಾಳಗಿ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

## ಸಂಪಾದಕೀಯ

# ಚಿನ್ನ: ಕೇವಲ ಆಭರಣವಲ್ಲ, ಒಂದು ವಿವೇಕಯುತ ಹೂಡಿಕೆ

ಭಾರತ ಮತ್ತು ಚಿನ್ನದ ಸಂಬಂಧ ಅನಾದಿಕಾಲದಿಂದಲೂ ಬೆಳೆದು ಬಂದಿದೆ. ಇಲ್ಲಿ ಚಿನ್ನ ಕೇವಲ ಒಂದು ಲೋಹವಲ್ಲ, ಅದು ಸಂಸ್ಕೃತಿಯ ಪ್ರತೀಕ, ಸಮೃದ್ಧಿಯ ಸಂಕೇತ, ಮತ್ತು ಭದ್ರತೆಯ ಭರವಸೆ. ಮದುವೆ ಸಮಾರಂಭಗಳಿರಲಿ, ಹಬ್ಬ ಹರಿದಿನಗಳಿರಲಿ, ಅಥವಾ ಯಾವುದೇ ಶುಭ ಕಾರ್ಯಗಳಿರಲಿ, ಚಿನ್ನವು ಭಾರತೀಯರ ಜೀವನದಲ್ಲಿ ಹಾಸುಹೊಕ್ಕಾಗಿದೆ.

ಹೆಣ್ಣುಮಕ್ಕಳಿಗೆ ಆಭರಣಗಳ ರೂಪದಲ್ಲಿ ಚಿನ್ನವನ್ನು ಉಡುಗೊರೆಯಾಗಿ ನೀಡುವುದು ಇಲ್ಲಿನ ಸಂಪ್ರದಾಯ. ಆದರೆ, ಕಾಲ ಬದಲಾದಂತೆ ಚಿನ್ನದ ಈ ವ್ಯಾಖ್ಯಾನವನ್ನು ವಿಸ್ತರಿಸಬೇಕಾದ ಅನಿವಾರ್ಯತೆ ಇದೆ. ಕೇವಲ ಆಕರ್ಷಕ ಆಭರಣವಾಗಿ ಮಾತ್ರವಲ್ಲದೆ, ಚಿನ್ನವನ್ನು ಒಂದು ವಿವೇಕಯುತ ಹೂಡಿಕೆಯಾಗಿಯೂ ಪರಿಗಣಿಸುವ ಮತ್ತು ಆ ಮೂಲಕ ಆರ್ಥಿಕ ಸಾಕ್ಷರತೆಯನ್ನು ಹೆಚ್ಚಿಸುವ ಅಗತ್ಯ ಇಂದು ನಮ್ಮ ಮುಂದಿದೆ.

ಚಿನ್ನದ ಬಾಂಡ್‌ಗಳಂತಹ ಯೋಜನೆಗಳು ಈ ದಿಕ್ಕಿನಲ್ಲಿ ಒಂದು ಉತ್ತಮ ಹೆಜ್ಜೆಯಾಗಿದೆ. ಇದು ಭೌತಿಕ ಚಿನ್ನದ ಸಂಗ್ರಹಣೆಯ ತೊಂದರೆಯನ್ನು ತಪ್ಪಿಸಿ, ಚಿನ್ನದ ಬೆಲೆಯ ಏರಿಕೆಯ ಲಾಭವನ್ನು ಹೂಡಿಕೆದಾರರಿಗೆ ನೀಡುತ್ತದೆ. ಜೊತೆಗೆ, ನಿಯಮಿತ ಬಡ್ಡಿಯನ್ನು ನೀಡುವುದರಿಂದ ಇದು ಹೆಚ್ಚು ಆಕರ್ಷಕ ಹೂಡಿಕೆಯ ಆಯ್ಕೆಯಾಗಿ ಬೆಳೆಯುತ್ತಿದೆ.

ಆದರೆ, ಈ ಯೋಜನೆಗಳ ಕುರಿತು ಜನರಲ್ಲಿ ಇನ್ನೂ ಹೆಚ್ಚಿನ ಅರಿವು ಮೂಡಿಸುವ ಅಗತ್ಯವಿದೆ. ಗ್ರಾಮೀಣ ಪ್ರದೇಶಗಳಲ್ಲಿ ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗಗಳಲ್ಲಿ ಇದರ ಬಗ್ಗೆ ಮಾಹಿತಿ ತಲುಪಿಸುವುದು ಒಂದು ಸವಾಲಾಗಿದೆ. ಸರ್ಕಾರವು ವ್ಯಾಪಕವಾದ ಜಾಗೃತಿ ಅಭಿಯಾನಗಳನ್ನು ಆಯೋಜಿಸುವ ಮೂಲಕ, ಚಿನ್ನವನ್ನು ಕೇವಲ ಆಭರಣವೆಂದು ಪರಿಗಣಿಸದೆ, ಅದೊಂದು ಮೌಲ್ಯಯುತ ಹೂಡಿಕೆಯ ಸಾಧನವೆಂದು ಮನವರಿಕೆ ಮಾಡಿಕೊಡಬೇಕಿದೆ.

ಭಾರತೀಯರ ಚಿನ್ನದ ಮೇಲಿನ ಮೋಹವನ್ನು ಆರ್ಥಿಕ ಸಾಕ್ಷರತೆಯ ಕಡೆಗೆ ತಿರುಗಿಸುವುದು ಒಂದು ದೀರ್ಘಕಾಲೀನ ಪ್ರಕ್ರಿಯೆ. ಇದಕ್ಕೆ ಸರ್ಕಾರದ ಬದ್ಧತೆ, ಹಣಕಾಸು ಸಂಸ್ಥೆಗಳ ಸಹಕಾರ ಮತ್ತು ಜನರ ಸಕ್ರಿಯ ಭಾಗವಹಿಸುವಿಕೆ ಅತ್ಯಗತ್ಯ.

## ಇಂದಿನ ಮಕ್ಕಳಿಗಿಲ್ಲ ಅಂದಿನ ಬಾಲ್ಯದ ಸವಿ ಸವಿ ನೆನಪು

# ಮರೆತೇನೆಂದರೆ ಮರೆಯಲಿ ಹ್ಯಾಂಗ



ಇಂದಿನ ರಜಾದಿನಗಳಲ್ಲಿ ಮನೆಮನೆಗಳಲ್ಲೂ ರಜೆಯ ಮಜ ಸವಿಯುತ್ತಿರುವ ಮಕ್ಕಳು. ಮಕ್ಕಳ ಚೀರಾಟ, ಹಾರಾಟ, ಜಗಳ, ಗದ್ದಲ ಕೋಲಾಹಲಗಳಿಂದ ಕಂಗೆಟ್ಟಿರುವ ಪಾಲಕರು. ಮನೆಯ ಹೊರಗಡೆ ಬಿಸಿಲಿನ ತಾಪವಾದರೆ, ಮನೆಯೊಳಗಡೆ ಮಕ್ಕಳ ಪ್ರತಾಪ. ತಾಯಂದಿರು ಕುಕ್ಕರ್‌ಗಳಾಗಿದ್ದರೆ ಸಿಡಿದು ಹೋಗುತ್ತಿದ್ದರೇನೋ. ಹಿಂದೆ ಹೀಗಿರಲಿಲ್ಲವೇ ಎಂದು ಯೋಚಿಸಿದರೆ ಮನಸ್ಸು ನಮ್ಮ ಬಾಲ್ಯದ ದಿನಗಳತ್ತ ಓಡಿತು.

ನಮಗೆ ಪ್ರತಿವರ್ಷ ಬೇಸಿಗೆಯಲ್ಲಿ ಎರಡು ತಿಂಗಳ ದೀರ್ಘಾವಧಿಯ ರಜೆ ಮತ್ತು ದಸರೆಯಲ್ಲಿ 15ರಿಂದ 30 ದಿನಗಳ ಅಲ್ಪಾವಧಿ ರಜೆ ಇರುತ್ತಿತ್ತು. ಹಿಂದೆ ಅವಿಭಕ್ತ ಕುಟುಂಬಗಳು ಇದ್ದು, ರಜೆ ಬಿಟ್ಟೊಡನೆ ನಾವು ಮಕ್ಕಳು ಅಜ್ಜನ ಮನೆಗೆ, ಮಾವನ ಮನೆ, ಚಿಕ್ಕಮ್ಮ-ದೊಡ್ಡಮ್ಮರ ಮನೆಗೆ, ಸೋದರತ್ತೆಯ ಮನೆಗೆ ಹೋಗುತ್ತಿದ್ದೆವು. ಹಳ್ಳಿಯ ವಿಶಾಲವಾದ ಬಂಕದ ಮನೆಗಳು, ಹಿತ್ತಲಲ್ಲಿರುವ ದೊಡ್ಡ ದೊಡ್ಡ ಕಟ್ಟೆಗಳು, ಊರ ಮುಂದಿನ ಹೊಳೆ-ಹಳ್ಳಗಳು, ತೋಟಗಳು, ಹೊಲಗದ್ದೆಗಳು, ತೋಪುಗಳು, ದೇವಸ್ಥಾನದ ಆವರಣಗಳು, ಒಂದೇ ಎರಡೇ ನಮಗೆ ಆಟವಾಡಲು. ಬೆಳಿಗ್ಗೆ ಎದ್ದು ಮುಖಮಾರ್ಜನ ಮಾಡಿ ಚಹಾ ಇಲ್ಲವೇ ಹಾಲನ್ನು ಕುಡಿದು ಟವಲನ್ನು ಸುತ್ತಿ ಕೈಯಲ್ಲಿ ಹಿಡಿದು ಹಿರಿಯರ ಮೇಲುಸ್ತುವಾರಿಯಲ್ಲಿ ಬಾವಿಗೆ ಈಜಲು ತೆರಳುವುದು. ಒಂದೆರಡು ಗಂಟೆಗಳ ಕಾಲ ಈಜು ಮೋಜು ಎಲ್ಲವೂ ಒಟ್ಟಿಗೆ ನಡೆದು ನಂತರ ಬಾವಿಯಿಂದ ಹೊರಗೆ ಬಂದರೆ ಕೈ, ಕಾಲುಗಳ ಬೆರಳುಗಳು ನೀರಿನ ಹೊಡೆತಕ್ಕೆ ಮುದುರಿ ಗಗ್ಗರಿಗಟ್ಟುತ್ತಿದ್ದವು.

ನಂತರ ಮನೆಗೆ ಬಂದು ಮತ್ತೊಮ್ಮೆ ಸ್ನಾನ ಮಾಡಿ ತಿಂಡಿ ತಿಂದು ವಾರಿಗೆಯ ಮಕ್ಕಳೊಡನೆ ಬೀದಿಗಿಳಿದರಾಯಿತು. ಗೋಲಿ, ಮರಕೋತಿಯಾಟ, ಸರಬಡಿಗೆಯಾಟ, ಕಣ್ಣ ಮುಚ್ಚಾಲೆ ಹೆಣ್ಣುಮಕ್ಕಳಾದರೆ ಕುಂಟೆಬಿಲ್ಲೆ ಆಣೆಕಲ್ಲು, ಗಜ್ಜುಗ, ಬಳೆ ಚೂರಿನ ಆಟ ಹೀಗೆ ಹತ್ತು ಹಲವು ಆಟಗಳನ್ನು ಆಡಿ ಮನೆಯವರ ಕೂಗಿಗೆ ಓಗೊಟ್ಟು ಮನೆಗೆ ಬಂದು ಕೈ ಕಾಲು ಮುಖ ತೊಳೆದು ಊಟ ಮಾಡುವುದು. ಬಿಸಿಲಿನ ಬೇಗೆಯ ನೆಪದಲ್ಲಿ ದೊಡ್ಡವರೆಲ್ಲ ವಿಶ್ರಾಂತಿ ಪಡೆಯಲು ಕೋಣೆ, ಪಡಸಾಲೆಗಳನ್ನು ಸೇರಿದರೆ ಮಕ್ಕಳು ಮನೆಯ ಹಿತ್ತಲಿನ ಕಟ್ಟೆಯ ಮೇಲೆ ಮತ್ತೆ ಜಮಾವಣೆಯಾಗುತ್ತಿದ್ದರು. ನಿದ್ದೆ ಬಾರದ ಅಜ್ಜ-ಅಜ್ಜಿ ಈ ಮಕ್ಕಳೊಂದಿಗೆ ಸೇರಿ ಚೌಕಾಬಾರ, ಕವಡೆ, ಹುಲಿಮನೆಗಳನ್ನು ಸೀಮೆಸುಣ್ಣದ ಪೆನ್ಸಿಲಿನಿಂದ ಬರೆದು ಆಟವಾಡುತ್ತಿದ್ದರು. ಕೊಂಚ ದೊಡ್ಡವರಾದ ನಂತರ ಚೆಸ್, ಕೇರಂ ಬೋರ್ಡ್, ಹಾವು ಏಣಿ ಆಟ, ಲುಡೋ, ರಾಜಾ-ರಾಣಿ, ಪೊಲೀಸ್-ಕಳ್ಳ ಮುಂತಾದ ಆಟಗಳಿಗೆ ಬಡ್ತಿ ದೊರೆತದ್ದು ನಿಜ.

ಟಿವಿ, ಮೊಬೈಲ್‌ಗಳಂತಹ ಯಾವುದೇ ಆಕರ್ಷಣೆಗಳು ನಮಗಿರದ ಕಾಲದಲ್ಲಿ ಪುಸ್ತಕ ನಮಗೆ ಅತ್ಯಂತ ಆತ್ಮೀಯ ಸಂಗಾತಿಯಾಗಿತ್ತು. ಮನೆಯ ಅಟ್ಟದಲ್ಲಿ ಇರುತ್ತಿದ್ದ ಪುಸ್ತಕಗಳನ್ನು ಓರಣವಾಗಿ ಜೋಡಿಸಿಟ್ಟುಕೊಂಡು ಓದಲಾರಂಭಿಸಿದರೆ ಊಟ-ನಿದ್ರೆಗಳನ್ನು ಕೂಡ ಮರೆಯುವಂತಹ ದಿನಗಳು. ಚಂದಮಾಮ, ಬಾಲಮಿತ್ರ, ತರಂಗ, ಸುಧಾ, ಪ್ರಜಾ ಮತ, ಮಯೂರ, ಕಸ್ತೂರಿ, ತುಷಾರ ಮಾಸಪತ್ರಿಕೆಗಳ ಮಕ್ಕಳ ಪುಟಗಳಲ್ಲದೆ ಕಥೆ ಕಾದಂಬರಿಗಳನ್ನು ಕೂಡ ಓದುತ್ತಿದ್ದೆವು.

ಹೊಲಕ್ಕೆ ಹೋದರೆ ಯಾರದ್ದೋ ಹೊಲದ ಮಾವಿನಕಾಯಿ, ಪೇರಲಹಣ್ಣು, ಚಿಕ್ಕು ಕಾಯಿಗಳನ್ನು ತಿನ್ನುವ ಬಯಕೆ. ತೆಂಗಿನ ಎಳನೀರನ್ನು ಕುಡಿದು ಹೊಟ್ಟೆ ತುಂಬಿಸಿಕೊಂಡದ್ದು ಉಂಟು. ಮರದಲ್ಲಿ ಸಿಕ್ಕುವ ಹುಣಸೆ ಕಾಯಿ ಆರಿಸಿ ತಂದು ಮನೆಯ ಹಿರಿಯರನ್ನು ಕಾಡಿ ಬೇಡಿ ಉಪ್ಪು ಬೆಲ್ಲ ಜೀರಿಗೆ ಹಾಕಿ ನುಣ್ಣಗೆ ಚಿಗಳಿ ಕುಟ್ಟಿಸಿಕೊಂಡು ತಿನ್ನುವ ಸಂಭ್ರಮ. ನೆಲಗಡಲೆ ಅಥವಾ ಶೇಂಗಾ ಬೀಜ, ನೆನೆ ಹಾಕಿದ ಹುಣಸೆ ಬೀಜಗಳನ್ನು ಹುರಿದು ತಿನ್ನಲು ಒಯ್ಯುತ್ತಿದ್ದುದು ಕೂಡ ವಿಶೇಷವೇ. ಹತ್ತು ಪೈಸೆಗೆ ದೊರೆಯುವ ಕ್ಯಾಂಡಿ, 25 ಪೈಸೆಗೆ ದೊರೆಯುವ ಹಾಲಿನ ಐಸ್ ಕೊಡಿಸಿದರಂತೂ ಸ್ವರ್ಗಕ್ಕೆ ಎರಡೇ ಮೆಟ್ಟಿಲು. ಆದರೆ ಅವು ಕೂಡ ಎಲ್ಲರ ಪಾಲಿಗೆ ದುಬಾರಿ ಹವ್ಯಾಸಗಳು.

ಸಂಜೆ ಮತ್ತೆ ಮನೆಯ ಬಳಿ ಸಾರಿ ಕೈ ಕಾಲು ಮುಖ ತೊಳೆದು ಮನೆಯ ಹಿರಿಯರ ಜೊತೆ ಊರ ಮುಂದಣ ದೇವಸ್ಥಾನಕ್ಕೆ ಹೋಗಿ ದೇವರಿಗೆ ನಮಸ್ಕರಿಸಿ ಹಿರಿಯರು ದೇವಸ್ಥಾನದ ಜಗಲಿಯ ಮೇಲೆ ಕಾಲಕ್ಷೇಪ ಕ್ಕಾಗಿ ಮಾತನಾಡಲು ಕುಳಿತರೆ ದೇವಸ್ಥಾನದ ಆವರಣದಲ್ಲಿ ಮತ್ತೆ ಮಕ್ಕಳ ಕಲರವ. ವಿಶೇಷ ಪೂಜೆಯ ದಿನಗಳಾದರೆ ಪೂಜೆಯ ಪ್ರಸಾದ ವಿನಿಯೋಗ ಮತ್ತು ಪ್ರವಚನ ಕಾರ್ಯಕ್ರಮ. ಕಾರ್ಯಕ್ರಮ ಮುಗಿದ ನಂತರ ಮನೆಯವರೊಂದಿಗೆ ಮತ್ತೆ ಮನೆಯೆಡೆಗೆ ಪಯಣಿಸಿ ಊಟ ಮಾಡಿ ಮಲಗಿದರೆ ಮತ್ತೆ ಎಚ್ಚರವಾಗುವುದು ಬೆಳಗಾ ಮುಂಜಾನೆ ಹಕ್ಕಿಗಳ ಚಿಲಿಪಿಲಿ ಶಬ್ದ ಕೇಳಿದಾಗಲೇ.

ಇನ್ನು ಕೆಲವೊಮ್ಮೆ ಹಪ್ಪಳ, ಉಪ್ಪಿನಕಾಯಿ, ಸಂಡಿಗೆ ತಯಾರಿಯಲ್ಲಿ ಮನೆಯ ಹಿರಿಯರು ತೊಡಗಿದಾಗ ಅವರಿಗೆ ಗೊತ್ತಿಲ್ಲದಂತೆ ಉಪ್ಪಿನಕಾಯಿಗೆ ಹೆಚ್ಚಿದ ಹೋಳುಗಳನ್ನು ಕದ್ದು ತಂದು ಅದಕ್ಕೆ ಕಾರ ಉಪ್ಪು ಹಚ್ಚಿ ಸವಿಯುವುದು, ಸಂಡಿಗೆ ಹಾಕಿದ ನಂತರ ಉಳಿದ ಗಟ್ಟಿಯಾದ ಸಂಡಿಗೆ ಹಿಟ್ಟನ್ನು ತಿನ್ನುವುದು ಹಪ್ಪಳದ ಹಿಟ್ಟನ್ನು ಹಸಿಯಾಗಿಯೇ ತಿನ್ನುವುದು ಹೆಣ್ಣು ಮಕ್ಕಳಾದರೆ ಹಪ್ಪಳ ಸಂಡಿಗೆಗಳ ತಯಾರಿಯಲ್ಲಿ ಸಂಡಿಗೆ ಹಾಕುವುದು ಹಪ್ಪಳ ಲಟ್ಟಿಸುವುದನ್ನು ಕಲಿಯುತ್ತಿದ್ದರು.

ಇನ್ನು ರಜೆಯ ಸಮಯದಲ್ಲಿ ಮನೆಗಳಲ್ಲಿ ಮದುವೆ ಸಂಭ್ರಮವಿದ್ದರೆ ಆ ಮಾತೇ ಬೇರೆ. ಹಿರಿಯರೊಂದಿಗೆ ಜವಳಿ ಖರೀದಿಯಿಂದ ಹಿಡಿದು ಮನೆಗೆ ಬೇಕಾಗುವ ಎಲ್ಲ ಖರೀದಿ ಕಾರ್ಯಕ್ರಮಗಳಲ್ಲಿ ಸಕ್ರಿಯ ಪಾಲ್ಗೊಳ್ಳುವಿಕೆ, ನಮಗೂ ಬಟ್ಟೆ ಬರೆ ಕೊಡಿಸಿದರೆ ಸಂಭ್ರಮ ಇನ್ನೂ ದುಪ್ಪಟ್ಟಾಗುವುದು. ಸೀಮಂತ ಕಾರ್ಯ, ನಾಮಕರಣ ಜವಳ, ದೈವ ದರ್ಶನ ಹೀಗೆ ಹತ್ತು ಹಲವಾರು ಕಾರ್ಯಕ್ರಮಗಳು ರಜೆಯ ದಿನಗಳಲ್ಲಿ.

ಹೀಗೆ ಯಾವುದೇ ಚಿಂತೆ, ಅಡ್ಡಿ-ಆತಂಕಗಳಿಲ್ಲದೆ ರಜಾ ದಿನಗಳನ್ನು ಕಳೆದು ನೆನಪಿನ ಬುತ್ತಿಗೆ ಮತ್ತಷ್ಟು ಸವಿ ನೆನಪುಗಳನ್ನು ಸೇರಿಸಿ ಎಲ್ಲರಿಗೂ ಮತ್ತೆ ಮುಂದಿನ ರಜೆಯಲ್ಲಿ ಸಿಗುವ ವಾಗ್ದಾನ ಮಾಡಿ ಊರಿನಡೆಗೆ ಮುಖ ಮಾಡುತ್ತಿದ್ದೆವು. ಎಷ್ಟು ಚಂದ ಬಾಲ್ಯದ ಆ ದಿನಗಳು..... ಮರೆತೇನೆಂದರೆ ಮರೆಯಲಿ ಹ್ಯಾಂಗ...

– **ವೀಣಾ ಹೇಮಂತ್‌ಗೌಡ ಪಾಟೀಲ್.**
ಮುಂಡರಗಿ.

# ಪುಲ್ವಾಮಾದಲ್ಲಿ ಎನ್‌ಕೌಂಟರ್: ಮೂವರು ಭಯೋತ್ಪಾದಕರ ಸಾವು



**■ವಿಜಯಸಾಕ್ಷಿ ಸುದ್ದಿ, ಜಮ್ಮು ಕಾಶ್ಮೀರ**

ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾ ಜಿಲ್ಲೆಯಲ್ಲಿ ಗುರುವಾರ ಭದ್ರತಾ ಪಡೆಗಳು ನಡೆಸಿದ ಎನ್‌ಕೌಂಟರ್‌ನಲ್ಲಿ ಮೂವರು ಅಪರಿಚಿತ ಭಯೋತ್ಪಾದಕರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ದಕ್ಷಿಣ ಕಾಶ್ಮೀರ ಜಿಲ್ಲೆಯ ಅವಂತಿಪೋರಾದ ನಾಡರ್ ಟ್ರಾಲ್ ಪ್ರದೇಶದಲ್ಲಿ ಭಯೋತ್ಪಾದಕರು ಇರುವ ಬಗ್ಗೆ ನಿರ್ದಿಷ್ಟ ಮಾಹಿತಿ ಪಡೆದ ನಂತರ ಭದ್ರತಾ ಪಡೆಗಳು ಸುತ್ತುವರಿದು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿವೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಭಯೋತ್ಪಾದಕರು ಪಡೆಗಳ ಮೇಲೆ ಗುಂಡು ಹಾರಿಸಿದ ನಂತರ ಶೋಧ ಕಾರ್ಯಾಚರಣೆಯು ಎನ್ಕೌಂಟರ್ ಆಗಿ ಬದಲಾಯಿತು, ಅವರು ಪ್ರತಿದಾಳಿ ನಡೆಸಿದರು ಎಂದು ಅವರು ಹೇಳಿದರು.

ಗುಂಡಿನ ಚಕಮಕಿಯಲ್ಲಿ ಮೂವರು ಭಯೋತ್ಪಾದಕರು ಸಾವನ್ನಪ್ಪಿದ್ದಾರೆ. ಹತ್ಯೆಗೀಡಾದ ಭಯೋತ್ಪಾದಕರ ಗುರುತು ಮತ್ತು ಗುಂಪು ಸಂಬಂಧವನ್ನು ಇನ್ನೂ ಖಚಿತಪಡಿಸಿಕೊಳ್ಳಲಾಗಿಲ್ಲ ಎಂದು ಅಧಿಕಾರಿ ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ಕಾರ್ಯಾಚರಣೆ ಇನ್ನೂ ನಡೆಯುತ್ತಿದೆ.

# ಕರ್ನಲ್ ಸೋಫಿಯಾ ಖುರೇಷಿ ಕುರಿತು ಸಚಿವನ ಹೇಳಿಕೆ: ಮಾಯಾವತಿ ಖಂಡನೆ



**■ವಿಜಯಸಾಕ್ಷಿ ಸುದ್ದಿ, ಲಖನೌ:**

ಭಾರತೀಯ ಸೇನಾಧಿಕಾರಿ ಕರ್ನಲ್ ಸೋಫಿಯಾ ಖುರೇಷಿ ಅವರ ವಿರುದ್ಧ ಮಧ್ಯಪ್ರದೇಶ ಸಚಿವ ವಿಜಯ್ ಶಾ ಅವರು ಮಾಡಿರುವ 'ಪಾಕಿಸ್ತಾನ ಭಯೋತ್ಪಾದಕರ ಸಹೋದರಿ' ಹೇಳಿಕೆಯನ್ನು ಬಿಎಸ್ಪಿ ಮುಖ್ಯಸ್ಥೆ ಮಾಯಾವತಿ ಗುರುವಾರ ತೀವ್ರವಾಗಿ ಖಂಡಿಸಿದ್ದಾರೆ ಮತ್ತು ಬಿಜೆಪಿಯಿಂದ ತಕ್ಷಣದ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

ಈ ಕುರಿತು ಬಿಜೆಪಿಯ ಕ್ರಮಕ್ಕಾಗಿ ಇಡೀ ದೇಶದ ಜನತೆ ಕೇವಲ ಎಫ್‌ಐಆರ್ ಮಾತ್ರ ನಿರೀಕ್ಷಿಸುತ್ತಿಲ್ಲ, ರಾಷ್ಟ್ರೀಯ ಏಕತೆ ಮತ್ತು ಘನತೆಯನ್ನು ಎತ್ತಿಹಿಡಿಯಲು ಪರಿಪೂರ್ಣ ಕ್ರಮಕ್ಕಾಗಿ ಕಾಯುತ್ತಿದೆ ಎಂದು ಅವರು ಹೇಳಿದರು.

ಇತ್ತೀಚಿನ ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಆಪರೇಷನ್ ಸಿಂಧೂರ್ ಮೂಲಕ ಭಾರತದ ಮಿಲಿಟರಿ ಪ್ರತಿಕ್ರಿಯೆಯನ್ನು ಉಲ್ಲೇಖಿಸಿದ ಮಾಯಾವತಿ, ಕಾರ್ಯಾಚರಣೆಯ ಸಮಯದಲ್ಲಿ ಪ್ರಮುಖ ವಕ್ತಾರೆಯಾಗಿದ್ದ ಮುಸ್ಲಿಂ ಮಹಿಳಾ ಸೇನಾ ಅಧಿಕಾರಿಯನ್ನು ಅವಹೇಳನಕಾರಿ ಹೇಳಿಕೆಗಳಿಂದ ಗುರಿಯಾಗಿಸಿಕೊಂಡಿರುವುದು ತೀವ್ರ ಅನುಚಿತವಾಗಿದೆ ಎಂದು ಹೇಳಿದರು.

ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ ಬುಧವಾರ ವಿಜಯ್ ಶಾ ಅವರ ಹೇಳಿಕೆಗಳನ್ನು ಟೀಕಿಸಿದರು, ಅವುಗಳನ್ನು ಅಸಭ್ಯ ಮತ್ತು ಸೇನೆಯ ಯಶಸ್ಸಿನ ಬಗ್ಗೆ ದೇಶದ ಸಾಮೂಹಿಕ ಹೆಮ್ಮೆಗೆ ಹಾನಿ ಮಾಡುವ ಪ್ರಯತ್ನ ಎಂದು ಕರೆದರು.

"ಪಹಲ್ಗಾಮ್ ದಾಳಿಯ ನಂತರ, ಮಧ್ಯಪ್ರದೇಶದ ಹಿರಿಯ ಸಚಿವರು ಆಗಿರುವ ಇವರು ಆಪರೇಷನ್ ಸಿಂಧೂರ್ ಸಮಯದಲ್ಲಿ ಪ್ರಮುಖ ವ್ಯಕ್ತಿಯಾಗಿದ್ದ ಮುಸ್ಲಿಂ ಮಹಿಳಾ ಕರ್ನಲ್ ಬಗ್ಗೆ ಅಸಭ್ಯ ಹೇಳಿಕೆಗಳನ್ನು ನೀಡಿದ್ದಾರೆ. ಹೈಕೋರ್ಟ್‌ನ ಕಠಿಣ ನಿಲುವಿನ ನಂತರ ನಿನ್ನೆ ತಡರಾತ್ರಿ ದಾಖಲಾಗಿರುವ ಎಫ್‌ಐಆರ್ ಸಮರ್ಥನೀಯ ಹೆಜ್ಜೆಯಾಗಿದ್ದರೂ, ದೇಶವು ಇನ್ನೂ ಬಿಜೆಪಿ ಕಡೆಯಿಂದ ಕ್ರಮಕ್ಕಾಗಿ ಕಾಯುತ್ತಿದೆ" ಎಂದು ಮಯಾವತಿಯವರು ಗುರುವಾರ ಫೇ ಪೋಸ್ಟ್ ಮಾಡಿದ್ದಾರೆ.

ಕೋಮು ಮತ್ತು ಜಾತಿ ಆಧಾರಿತ ದ್ವೇಷ, ಹಿಂಸಾಚಾರ ಮತ್ತು ಉದ್ವಿಗ್ನತೆ ಹೆಚ್ಚಾಗುತ್ತಿರುವುದು ದೇಶದ ಪ್ರಗತಿಗೆ ಅಪಾಯವನ್ನುಂಟುಮಾಡುತ್ತದೆ ಎಂದು ಮಾಯಾವತಿ ಎಚ್ಚರಿಸಿದ್ದಾರೆ.

# ಆರೋಗ್ಯ ಇಲ್ಲದಿದ್ದರೆ ಎಲ್ಲವೂ ವ್ಯರ್ಥ



**■ವಿಜಯಸಾಕ್ಷಿ ಸುದ್ದಿ, ಗದಗ**

ನಿತ್ಯ ಜೀವನದ ವ್ಯವಹಾರದಲ್ಲಿ ನಾವು ನಮ್ಮ ಸಂಪರ್ಕದಲ್ಲಿರುವ ವ್ಯಕ್ತಿಗಳ ಜೊತೆ ಯಾವುದಾದರೊಂದು ವಿಷಯದ ಕುರಿತು ಮಾತನಾಡುವಾಗ ಸಹಜವಾಗಿ ನೀವು ಸುದ್ಯೆವಿಗಳು, ನಿಮ್ಮ ಹಣೆಬರಹ ಚೆನ್ನಾಗಿದೆ, ನೀವು ಕೋಟ್ಯಾಧಿಪತಿಗಳು, ನೀವು ಭಾಗ್ಯವಂತರು ಎಂದು ಹೇಳಿ ನಮ್ಮ ಬಗ್ಗೆ ಖಿನ್ನತೆ ತಾಳುತ್ತೇವೆ. ಇಲ್ಲಿ ದೈಹಿಕ ಹಾಗೂ ಮಾನಸಿಕವಾಗಿ ಆರೋಗ್ಯದಿಂದಿರುವವರು ಭಾಗ್ಯವಂತರು. ನಮ್ಮಲ್ಲಿ ಏನೆಲ್ಲ ಭಾಗ್ಯಗಳಿದ್ದರೂ ಆರೋಗ್ಯಭಾಗ್ಯ ಇಲ್ಲದಿದ್ದರೆ ಎಲ್ಲವೂ ವ್ಯರ್ಥ ಎಂದು ಸ್ಥಳೀಯ ಡಿ.ಜಿ.ಎಂ. ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಪ್ರಾಧ್ಯಾಪಕ ಡಾ. ಎಂ.ವಿ. ಐಹೊಳ್ಳಿ ಅಭಿಪ್ರಾಯಪಟ್ಟರು.

ಇಲ್ಲಿನ ಎಸ್.ವಾಯ್.ಬಿ.ಎಂ. ಎಸ್. ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವದ ಪ್ರಯುಕ್ತ ಯೋಗ ಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಸಿದ್ಧಲಿಂಗ ನಗರದಲ್ಲಿನ ಬಸವ ಪ್ರಭೆ ಆವರಣದಲ್ಲಿ ಏರ್ಪಡಿಸಿದ್ದ ಉಚಿತ ಆರೋಗ್ಯ-ಯೋಗ ತರಬೇತಿ ಶಿಬಿರದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಆರೋಗ್ಯ ಇಲಾಖೆಯ ಅಭಿಯಂತರ ಆನಂದ ಬದಿ ಮಾತನಾಡಿ, ಇಂದಿನ ಕಲುಷಿತ ವಾತಾವರಣದಲ್ಲಿ ನಮ್ಮ ದೇಹ, ಮನಸ್ಸುಗಳ ಆರೋಗ್ಯ, ಸಂರಕ್ಷಣೆಗೆ ಯೋಗ ಸಹಾಯಕವಾಗಿದೆ. ಯೋಗ ತರಬೇತಿಯನ್ನು ಮುಂದುವರಿಸಿ ಆರೋಗ್ಯವಂತರಾಗಿರಲು ಪ್ರಯತ್ನಿಸಬೇಕೆಂದು ಹೇಳಿದರು.

ವೇದಿಕೆಯಲ್ಲಿ ಯೋಗ ಸಾಧಕಿ ಸುವರ್ಣ ಹೊಂಬಾಳಿಮಠ ಸೇರಿದಂತೆ ಗಣ್ಯಮಾನ್ಯರು ಉಪಸ್ಥಿತರಿದ್ದರು. ಜಯಶ್ರೀ ವಸ್ತ್ರದ ಸ್ವಾಗತ ಕೋರಿದರು.

ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಶಿಬಿರದ ಕುರಿತು ಪ್ರಾಸ್ತಾವಿಕ ನುಡಿ ತಿಳಿಸಿದರು. ಶಿಬಿರ ಶಿಕ್ಷಕ ರವಿ ಹುಡೇದ ಕಾರ್ಯಕ್ರಮ ನಿರೂಪಿಸಿದರು. ಸಂಜನಾ ಸಜ್ಜನರ ವಂದಿಸಿದರು.

## ಹನಮಂತಸಿಂಗ್ ಜಮಾದಾರರ 51ನೇ ಪುಣ್ಯಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಡಿ.ಆರ್. ಪಾಟೀಲ ಶ್ಲಾಘನೆ

# ಸಮಾಜಮುಖಿ ಕಾರ್ಯಗಳನ್ನು ಮೈಗೂಡಿಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಗದಗ**

ನಿವೃತ್ತಿಯ ನಂತರ ಬಂದ ಹಣವನ್ನು ತಮ್ಮ ಅಜ್ಜನವರ ಹೆಸರಿನಲ್ಲಿ ದತ್ತಿ ನಿಧಿಯಾಗಿಟ್ಟು, ಅದನ್ನು ಸಮಾಜಮುಖಿ ಚಟುವಟಿಕೆಗಳಿಗಾಗಿ ಬಳಸುವ ನಿವೃತ್ತ ಶಿಕ್ಷಕ ಎಸ್.ಎ. ಜಮಾದಾರರ ಕಾರ್ಯ ಅಪರೂಪದ್ದು ಎಂದು ಹಿರಿಯ ರಾಜಕಾರಣಿ ಡಿ.ಆರ್. ಪಾಟೀಲ ಶ್ಲಾಘಿಸಿದರು.

ಅವರು ಇಲ್ಲಿನ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ಶಾಸ್ತ್ರಿ ಹನಮಂತಸಿಂಗ್ ಜಮಾದಾರರ 51ನೇ ಪುಣ್ಯಸ್ಮರಣೋತ್ಸವ, ಅವರ ಜೀವನ ಚರಿತ್ರೆಯ ಪುಸ್ತಕ ಬಿಡುಗಡೆ, ಪ್ರತಿಭಾವಂತ ಹಾಗೂ ಸಾಧಕರ ಸನ್ಮಾನ ಸಮಾರಂಭದಲ್ಲಿ ಮಾತನಾಡುತ್ತಿದ್ದರು.

ಸಮಾಜಮುಖಿ ಕೆಲಸ-ಕಾರ್ಯಗಳಲ್ಲಿ ತೊಡಗುವ ಗುಣವನ್ನು ಎಲ್ಲರೂ ಮೈಗೂಡಿಸಿಕೊಳ್ಳಬೇಕಾದ ಅವಶ್ಯಕತೆ ಇದೆ. ರಜಪೂತ ಸಮಾಜದವರು ತಮಗೆ ಮತ್ತು ತಮ್ಮ ಸಹೋದರ, ಸಚಿವ ಎಚ್.ಕೆ. ಪಾಟೀಲರಿಗೆ ರಾಜಕೀಯ ಬೆಂಬಲ ನೀಡುತ್ತಿರುವುದು ಎಂದಿಗೂ ಮರೆಯಲಾಗದ ಸಂಗತಿ ಎಂದರು.



ಹಿರಿಯ ಸಾಹಿತಿ ಜೆ.ಕೆ. ಜಮಾದಾರ ಮಾತನಾಡಿ, ಹನಮಂತಸಿಂಗ್‌ರು ರಜಪೂತ ಸಮಾಜದಲ್ಲಿ ಅತ್ಯಂತ ಪ್ರತಿಭಾಶಾಲಿಗಳು. ಶಕ್ತಿ ಆರಾಧಕರಾಗಿದ್ದ ಅವರು ಅದ್ವೈತ ಸಿದ್ಧಾಂತವನ್ನು ಪ್ರತಿಪಾದಿಸುತ್ತಿದ್ದರು. ರೇಖಾಶಾಸ್ತ್ರ, ಪಂಚಾಂಗವನ್ನು ಅಭ್ಯಾಸ ಮಾಡಿದವರಾಗಿದ್ದರು. ಅವರ ಹೆಸರಿನಲ್ಲಿ ದತ್ತಿನಿಧಿ ಸ್ಥಾಪಿಸಿ, ಅವರ ನೆನಪು ಮರುಕಳಿಸುವಂತೆ ಮಾಡಿರುವ ಅವರ ಮೊಮ್ಮಗನ ಕಾರ್ಯ ಶ್ಲಾಘನೀಯ. ಸಮಾಜಕ್ಕೆ ಏನಾದರೂ ಮಾಡಬೇಕು ಎಂಬುದಕ್ಕೆ ಶ್ರೀಮಂತರೇ ಆಗಿರಬೇಕು ಎಂದೇನಿಲ್ಲ. ಅದಕ್ಕೆ ಪ್ರಾಮಾಣಿಕ ಮನಸ್ಸು, ಇಚ್ಛೆ ಇದ್ದರೆ ಸಾಕು ಎಂದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಜಿಲ್ಲಾ ನ್ಯಾಯಾಧೀಶ ಕೆ. ರವೀಂದ್ರಸಿಂಗ್, ಅತಿಥಿಗಳಾಗಿದ್ದ ಕೊಪ್ಪಳದ ಗವಿಸಿದ್ಧೇಶ್ವರ ಆಯುರ್ವೇದ ಕಾಲೇಜಿನ ಶಾಲಾಕ್ಯ ವಿಭಾಗದ ಮುಖ್ಯಸ್ಥರಾದ ಡಾ. ವೀರಯ್ಯ ಹಿರೇಮಠ, ಗದಗ ಜಿಲ್ಲಾ ಶಾಲಾ ಶಿಕ್ಷಣ ಮತ್ತು ವಯಸ್ಕರ ಶಿಕ್ಷಣ ಇಲಾಖೆಯ ಮುಖ್ಯಸ್ಥರಾದ ಆರ್.ಎಸ್. ಬುರಡಿ, ಮಹಾರಾಷ್ಟ್ರದ ಸಿಬಿಐ ವಿಶೇಷ ವಕೀಲರಾದ ಪ್ರದೀಪಸಿಂಗ್ ದೊಡ್ಡಮನಿಯವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಮೃದ್ಧಿ ಹನುಮಾನಸಿಂಗ್ ಜಮಾದಾರ ಪ್ರಾರ್ಥಿಸಿದರು. ಮಾಧ್ಯಮ ಅಕಾಡೆಮಿ ಪ್ರಶಸ್ತಿ ವಿಜೇತ ಹನಮಂತಸಿಂಗ್ ಜಮದಾರ ಸ್ವಾಗತಿಸಿ, ಪರಚಯಿಸಿದರು. ಬಿ. ರಾಜೇಂದ್ರಸಿಂಗ್ ಹಾಗೂ ಮಹೇಂದ್ರಸಿಂಗ್ ಮಾಲಾರ್ಪಣೆ ಮಾಡಿದರು. ಜಯಶ್ರೀ ರಜಪೂತ, ಯಶೋಧಾ ಜಮಾದಾರ, ಶ್ರೀದೇವಿ ದೊಡ್ಡಮನಿ ಭಕ್ತಿಗೀತೆ ಹಾಡಿದರು. ಶ್ರೀನಿಧಿ ಚರಣಸಿಂಗ್ ಭರತನಾಟ್ಯ ಪ್ರದರ್ಶನ ನೀಡಿದರು. ರಶ್ಮಿ ಜಮಾದಾರ, ಶ್ರೇಯಾ ಜಮಾದಾರ, ರೂಪಾಲಿ ಜಮಾದಾರ ಕಾರ್ಯಕ್ರಮ ನಿರೂಪಿಸಿದರು. ಶೇಡುಸಿಂಗ್ ಮತ್ತು ವಜ್ರಾಬಾಯಿ ದಂಪತಿಗಳನ್ನು ಸನ್ಮಾನಿಸಲಾಯಿತು. ವೀರೇಂದ್ರಸಿಂಗ್ ರಜಪೂತ ವಂದಿಸಿದರು.

## ಜಂಟಿ ಕೃಷಿ ನಿರ್ದೇಶಕರ ಕಚೇರಿ ಆವರಣದಲ್ಲಿ ವಿವಿಧ ಕಟ್ಟಡಗಳ ಉದ್ಘಾಟನೆ

# ಕೃಷಿಯಲ್ಲಿ ಕೃತಕ ಬುದ್ಧಿಮತ್ತೆ ಕೇಂದ್ರ ಕಟ್ಟಡ ಲೋಕಾರ್ಪಣೆ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡದ ಜಂಟಿ ಕೃಷಿ ನಿರ್ದೇಶಕರ ಕಚೇರಿ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ 'ಕೃಷಿಯಲ್ಲಿ ಕೃತಕ ಬುದ್ಧಿಮತ್ತೆ' ಕೇಂದ್ರದ ನೂತನ ಕಟ್ಟಡ, ಜಿಲ್ಲಾ ಕೃಷಿ ತರಬೇತಿ ಕೇಂದ್ರದ ನೂತನ ಕಟ್ಟಡ ಮತ್ತು ಜೈವಿಕ ಗೊಬ್ಬರ ಗುಣ ನಿಯಂತ್ರಣ ಪ್ರಯೋಗಾಲಯ ಕಟ್ಟಡವನ್ನು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಶಾಸಕ ಎನ್.ಎಚ್. ಕೋನರಡ್ಡಿ, ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಕೃಷಿ ಇಲಾಖೆ ಆಯುಕ್ತ ವೈ.ಎಸ್. ಪಾಟೀಲ, ಕೃಷಿ ಇಲಾಖೆ ನಿರ್ದೇಶಕ ಡಾ. ಜಿ.ಟಿ. ಪುತ್ರ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಮಲ್ಲನಗೌಡ ಪಾಟೀಲ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಕೃಷಿ ಇಲಾಖೆ ಅಧಿಕಾರಿಗಳು, ರೈತ ಪ್ರಮುಖರು ಉಪಸ್ಥಿತರಿದ್ದರು.



ಕೃತಕ ಬುದ್ಧಿಮತ್ತೆಯನ್ನು ಕೃಷಿ ಕ್ಷೇತ್ರದ ಅಭಿವೃದ್ಧಿಯಲ್ಲಿ ಬಳಸುವುದು ಯೋಜನೆಯ ಉದ್ದೇಶವಾಗಿದೆ. ಇದರಿಂದ ವಿವಿಧ ಕ್ಷೇತ್ರಗಳ ಜ್ಞಾನವನ್ನು ಬಳಸಿಕೊಳ್ಳಬಹುದು. ಇತ್ತೀಚಿನ ದಿನಮಾನಗಳಲ್ಲಿ ಈ ತಂತ್ರಜ್ಞಾನ ಬಳಸಿ ಉತ್ಪಾದನಾ ಪದ್ಧತಿ ಸುಧಾರಿಸಲಾಗಿದೆ, ಇಳುವರಿ ಹೆಚ್ಚಾಗಿದೆ, ಕೃಷಿ ಕ್ಷೇತ್ರವು ವೈವಿಧ್ಯಮಯವಾಗಿದೆ. ಯಥೇಚ್ಛ ಅಂಕಿ ಅಂಶ ಮತ್ತು ದೊಡ್ಡ ಪ್ರಮಾಣದ ಮಾಹಿತಿಯನ್ನು ಸಂಗ್ರಹಿಸುವುದು, ಬಳಸುವುದು, ಅವಶ್ಯವಾಗಿದೆ.

ಎಲ್ಲ ಕೆಲಸವನ್ನು ಸುಲಭವಾಗಿ ಹಾಗೂ ನಿಖರವಾಗಿ ಮಾಡಲು ಎಐ ಸಹಾಯಕವಾಗಿದೆ. ಕಾಲಕಾಲಕ್ಕೆ ಬದಲಾಗುತ್ತಿರುವ ಕೃಷಿ ವಲಯದ ವಿದ್ಯಮಾನಗಳ ಹಿನ್ನೆಲೆಯಲ್ಲಿ ನೀತಿ ನಿರ್ಧಾರ ರೂಪಿಸುವಲ್ಲಿ ಪ್ರಸ್ತುತ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕಾಗಿದೆ.

ಕೃತಕ ಬುದ್ಧಿಮತ್ತೆ ಕೇಂದ್ರ ಕಟ್ಟಡವನ್ನು 3.75 ಕೋಟಿ ಮೊತ್ತದಲ್ಲಿ ಕರ್ನಾಟಕ ಗೃಹ ಮಂಡಳಿ ನಿರ್ಮಿಸಿದೆ. ಕಟ್ಟಡದಲ್ಲಿ ವರ್ಕ್ ಸ್ಪೇಸ್ ಕ್ಯೂಬಿಕಲ್ಸ್, ಸರ್ವರ್ ಕೊಠಡಿ, ಬ್ಯಾಟರಿ ಕೊಠಡಿ, ಯುಟಿಲಿಟಿ ಮತ್ತು ಟೂಲ್ ರೂಮ್, ಕಾನ್ಫರೆನ್ಸ್ ಹಾಲ್, ಹಾಡ್ ಕ್ಯಾಬಿನ್, ಊಟದ ಕೊಠಡಿ, ಲಿಫ್ಟ್ ಇತ್ಯಾದಿ ವ್ಯವಸ್ಥೆಗಳನ್ನು ಮಾಡಲಾಗಿದೆ. ತರಬೇತಿ ಕೇಂದ್ರದ ನೂತನ ಕಟ್ಟಡವನ್ನು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ ಅಡಿಯಲ್ಲಿ, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಧಾರವಾಡ ಇವರಿಂದ ನಿರ್ಮಿಸಲಾಗಿದೆ.



2024-25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕಗಳನ್ನು ಗಳಿಸಿ ಶಾಲೆಗೆ ಮತ್ತು ಗ್ರಾಮಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳಾದ ಘನಶ್ಯಾಮ್ ಮೈಲಾರಪ್ಪ ದೊಡ್ಡಮನಿ, ವಿನಾಯಕ ಮಂಜುನಾಥ್ ಹೆಬ್ಬಳ್ಳಿ ಇವರನ್ನು ಗದುಗಿನ ನರಸಾಪುರದ ಶ್ರೀ ಗುಂಡದ್ ಮಾರುತಿ ದೇವಸ್ಥಾನ ಅಭಿವೃದ್ಧಿ ಸಮಿತಿ ಮತ್ತು ಶ್ರೀ ಮಾರುತಿ ನಗರದ ಹಿರಿಯರು ಸನ್ಮಾನಿಸಿ ಆಶೀರ್ವದಿಸಿದರು.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ 2025-26 ನೇ ಸಾಲಿಗೆ ಆನ್‌ಲೈನ್ ವಿಳಾಸ http://shp.karnataka.gov.in /bcwd ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಕೆಗೆ ಜೂನ್ 16 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

### ಜನನ-ಮರಣ ನೋಂದಣಿ ಪದ್ಧತಿಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಡಿಸಿ ಸಿ.ಎನ್.ಶ್ರೀಧರ್

# ನೋಂದಣಿ ಪ್ರಕ್ರಿಯೆಯಲ್ಲಿ ವಿಳಂಬವಾಗಬಾರದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯು ಯಾವುದೇ ಕಾರಣಕ್ಕೂ ವಿಳಂಬವಾಗದೇ ನಿಗದಿತ ಸಮಯದಲ್ಲಿ ಜರುಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜನನ-ಮರಣ ನೋಂದಣಿ ಪದ್ಧತಿಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯಲ್ಲಿ ಸರಿಯಾಗಿ ಮಾಹಿತಿದಾರರ ಹೆಸರು ಮತ್ತು ಸಹಿಯನ್ನು ಸಂಗ್ರಹಿಸಬೇಕು. ಅರ್ಜಿದಾರರ ಶುಲ್ಕವನ್ನು ನಿಯಮಿತವಾಗಿ ಸರ್ಕಾರಕ್ಕೆ ವಿಳಂಬ ಮಾಡದೇ ಜಮೆ ಮಾಡಬೇಕು. ನೋಂದಣಿ ಪ್ರಮಾಣಪತ್ರದಲ್ಲಿ ನೋಂದಣಾಧಿಕಾರಿಗಳ ಸಹಿ ಕಡ್ಡಾಯವಾಗಿರಬೇಕು. ಪ್ರಾಧಿಕಾರದ ಅನುಮತಿ ಇಲ್ಲದೇ ವಿಳಂಬ ನೋಂದಣಿ ಮಾಡಬಾರದು. ವಿನಾಕಾರಣ ವಿಳಂಬ ನೊಂದಣಿ ಮಾಡಿದರೆ ಶಿಸ್ತು ಕ್ರಮ ಜರುಗಿಸಲಾಗುವುದು. ಕಾನೂನು ವರದಿಗಳಲ್ಲಿ ನೋಂದಣಿ ಸಂಖ್ಯೆ ಮತ್ತು ನೋಂದಣಿ ದಿನಾಂಕ ನಮೂದು ಮಾಡಬೇಕು. ತಹಸೀಲ್ದಾರರ ನೇತೃತ್ವದಲ್ಲಿ ತಾಲೂಕು ಮಟ್ಟದ ಜನನ ಮತ್ತು ಮರಣ ಸಮನ್ವಯ ಸಮಿತಿ ಸಭೆಗಳನ್ನು ನಿಯಮಿತವಾಗಿ ಜರುಗಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.



ಜನವರಿ 2025ರಿಂದ ಮಾರ್ಚ್ 2025ರವರೆಗೆ ಜಿಲ್ಲೆಯಲ್ಲಿ ಜನನ ವಿಳಂಬ ನೋಂದಣಿ ವಿವರದ ಕುರಿತಂತೆ 2170 ಘಟನೆಗಳು ನಿಗದಿತ ಸಮಯದಲ್ಲಿ ನೋಂದಣಿಯಾಗಿವೆ. 124 ಘಟನೆಗಳು 21ರಿಂದ 30 ದಿನಗಳೊಳಗೆ ನೋಂದಣಿಯಾಗಿವೆ. 470 ಘಟನೆಗಳು 30 ದಿನಗಳ ಮೇಲೆ ಒಂದು ವರ್ಷದೊಳಗೆ ನೊಂದಣಿಯಾಗಿವೆ. 395 ಘಟನೆಗಳು ಒಂದು ವರ್ಷದ ಮೇಲ್ಪಟ್ಟು ನೋಂದಣಿಯಾಗಿವೆ. ಜನವರಿ 2025ರಿಂದ ಮಾರ್ಚ್ 2025ರವರೆಗೆ ಮರಣ ವಿಳಂಬ ನೋಂದಣಿ ವಿವರ ಕುರಿತಂತೆ ಜಿಲ್ಲೆಯಲ್ಲಿ 1494 ಘಟನೆಗಳು ನಿಗದಿತ ಸಮಯದಲ್ಲಿ ನೋಂದಣಿಯಾಗಿವೆ. 173 ಘಟನೆಗಳು 21ರಿಂದ 30 ದಿನಗಳೊಳಗಾಗಿ ನೊಂದಣಿಯಾಗಿವೆ. 382 ಘಟನೆಗಳು 30 ದಿನಗಳ ಮೇಲೆ ಒಂದು ವರ್ಷದ ಒಳಗಾಗಿ ನೊಂದಣಿಯಾಗಿವೆ. 173 ಘಟನೆಗಳು ಒಂದು ವರ್ಷದ ಮೇಲ್ಪಟ್ಟು ನೋಂದಣಿಯಾಗಿವೆ. 2024ನೇ ವರ್ಷದಲ್ಲಿ ತಾಲೂಕಾವಾರು ಜನನ ಮರಣ ನೋಂದಣಿ /ಉಪನೋಂದಣಿ ಘಟಕಗಳಿಗೆ ತಪಾಸಣೆ ಮಾಡಲಾಗಿದೆ ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ. ಕಂಬಾಳಿಮಠ ವಿವರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಹಾಜರಿದ್ದರು.

> ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ.ಕಂಬಾಳಿಮಠ ಮಾತನಾಡಿ, ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ 330 ನೋಂದಣಿ ಘಟಕಗಳು, 367 ಉಪ ನೋಂದಣಿ ಘಟಕಗಳು ಹಾಗೂ ನಗರ ಪ್ರದೇಶಗಳಲ್ಲಿ 9 ನೋಂದಣಿ ಘಟಕ, 12 ಉಪ ನೋಂದಣಿ ಘಟಕಗಳಿವೆ. ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮ ಲೆಕ್ಕಿಗರು ನೋಂದಣಾಧಿಕಾರಿಯಾಗಿರುತ್ತಾರೆ. ಪಿಡಿಓ ಮತ್ತು ಸಿಎಚ್‌ಸಿ ಮುಖ್ಯಸ್ಥರು ಉಪನೋಂದಣಾಧಿಕಾರಿಗಳಾಗಿರುತ್ತಾರೆ. ನಗರ ಪ್ರದೇಶದಲ್ಲಿ ಆರೋಗ್ಯ ನಿರೀಕ್ಷಕರು ನೋಂದಣಾಧಿಕಾರಿಗಳಾಗಿದ್ದು, ಆಸ್ಪತ್ರೆಯ ಮುಖ್ಯಸ್ಥರು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಉಪ ನೋಂದಣಾಧಿಕಾರಿಗಳಾಗಿರುತ್ತಾರೆ. ನಮೂನೆ 1 ಜನನ, ನಮೂನೆ 2-ಮರಣ, ನಮೂನೆ 3-ನಿರ್ಜೀವ ಜನನ ಇವುಗಳನ್ನು ಕಡ್ಡಾಯವಾಗಿ ಇ-ಜನ್ಮ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಬೇಕು ಎಂದರು.

## ಯೋಗದಿಂದ ರೋಗಮುಕ್ತ ಜೀವನ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಯೋಗದಿಂದ ರೋಗಮುಕ್ತ ಜೀವನ ಸಾಗಲು ಸಾಧ್ಯವಾಗುತ್ತದೆ ಎಂದು ಪ.ಪಂ ಸದಸ್ಯ ವಿಜಯ ನೀಲಗುಂದ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದಲ್ಲಿ ಶ್ರೀಮನ್ನಿರಂಜನ ಯಳಂದೂರ ಬಸವಲಿಂಗ ಮಾಹಾಸ್ವಾಮಿಗಳವರ ಸ್ಮಾರಕ ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವದ ಪ್ರಯುಕ್ತ ಉಚಿತ ಆರೋಗ್ಯ-ಯೋಗ ತರಬೇತಿ ಶಿಬಿರ ಉದ್ಘಾಟಿಸಿ ಮಾತನಾಡಿದರು.'

ನಿತ್ಯ ಯೋಗಾಭ್ಯಾಸ ಮಾಡುವುದರಿಂದ ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗಲು ಸಾಧ್ಯ. ಕಳೆದ 11 ವರ್ಷಗಳಿಂದ ಉಚಿತ ಯೋಗ ತರಬೇತಿಯನ್ನು ನಡೆಸುತ್ತಿರುವ ಪ್ರಕಾಶ ಮದ್ದಿನರ ಕಾರ್ಯ ಶ್ಲಾಘನೀಯ ಎಂದರು.

ಅಧ್ಯಕ್ಷತೆಯನ್ನು ಡಾ. ಎಸ್.ಸಿ. ಚವಡಿ ವಹಿಸಿದ್ದರು. ಮಂಜುನಾಥ ಮಟ್ಟಿ, ಸಿದ್ದಲಿಂಗೇಶ ಕುರ್ತಕೋಟಿ, ಕೆ.ಎಂ. ಹೆರಕಲ್ಲ, ಮಾಹಾಂತೇಶ ನಪೂರಿಮಠ, ಶೋಭಾ ಪಾಟೀಲ, ರಾಜೇಶ್ವರಿ ಬಡ್ನಿ, ಯೋಗ ಗುರು ಪ್ರಕಾಶ ಮದ್ದಿನ ಇದ್ದರು.

## ತಳ ಸಮುದಾಯಗಳ ಭಯದಿಂದ ಜಾತಿ ಗಣತಿ ಘೋಷಣೆ

■ವಿಜಯಸಾಕ್ಷಿ ಸುದ್ದಿ, ಪಾಟ್ನಾ

ದೇಶದ ತಳ ಸಮುದಾಯಗಳ "ಭಯದಿಂದ" ಪ್ರಧಾನಿ ನರೇಂದ್ರ ಮೋದಿ ಜಾತಿ ಜನಗಣತಿಗೆ ಆದೇಶಿಸಿದ್ದಾರೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಗುರುವಾರ ಹೇಳಿದ್ದಾರೆ, ವಿರೋಧ ಪಕ್ಷಗಳು ಈ ವಂಚಿತ ವರ್ಗಗಳ ಪರವಾಗಿ ನಿಲ್ಲುತ್ತಿವೆ ಎಂದು ಪ್ರತಿಪಾದಿಸಿದರು.

ಕೆಲ ತಿಂಗಳುಗಳ ನಂತರ ಬಿಹಾರದಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದ್ದು, ಇಲ್ಲಿಯ ದರ್ಭಾಂಗದಲ್ಲಿರುವ ಅಂಬೇಡ್ಕರ್ ಹಾಸ್ಟೇಲ್ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲು ರಾಹುಲ್ ಗಾಂಧಿ ತಲುಪುತ್ತಿದ್ದಂತೆ ಸ್ಥಳೀಯ ಆಡಳಿತವು ಅವರನ್ನು ತಡೆಯಲು ಪ್ರಯತ್ನಿಸಿತು. ಇದನ್ನು ದಿಕ್ಕರಿಸಿ ರಾಹುಲ್ ಅಲ್ಲಿ ತಮ್ಮ ಭಾಷಣವನ್ನು ಮಾಡಿದರು.

"ನಿಮ್ಮ ತಲೆಯಿಂದ ಸಂವಿಧಾನವನ್ನು ಮುಟ್ಟಿ ಎಂದು ನಾವು ಮೋದಿಗೆ ಹೇಳಿದ್ದೆವು ಮತ್ತು ಅವರು ಹಾಗೆ ಮಾಡಿದರು. ನೀವು ಜಾತಿ ಜನಗಣತಿ ನಡೆಸಬೇಕಾಗುತ್ತದೆ ಎಂದು ನಾವು ಅವರಿಗೆ ಹೇಳಿದ್ದೆವು. ಎರಡೂ ಸಂದರ್ಭಗಳಲ್ಲಿ ಜನರಿಂದ ಪ್ರತಿಕ್ರಿಯೆ ಸಿಗಬಹುದೆಂಬ ಭಯದಿಂದ ಮೋದಿ ಬೇಡಿಕೆಗಳಿಗೆ ಒಪ್ಪಿಕೊಂಡರು" ಎಂದು ಗಾಂಧಿ ಹೇಳಿಕೊಂಡರು.

"ಆದರೆ ಅವರ ಸರ್ಕಾರವು ಅಂಬಾನಿ, ಅದಾನಿ ಮುಂತಾದವರ ಹಿತಾಸಕ್ತಿಗಳನ್ನು ಪೂರೈಸುತ್ತದೆ ಎಂಬುದು ವಾಸ್ತವ. ಕೇಂದ್ರ ಸರಕಾರವು ದೇಶದ ಜನಸಂಖ್ಯೆಯ ಶೇ.5ರಷ್ಟು ಇರುವ ಈ ಬಂಡವಾಳಿಗರ ಪ್ರಯೋಜನಕ್ಕಾಗಿ ಕೆಲಸ ಮಾಡುತ್ತಿದೆ. ದಲಿತರು, ಒಬಿಸಿಗಳು ಮತ್ತು ಬುಡಕಟ್ಟು ಜನಾಂಗದವರಿಗೆ ಯಾವುದೇ ಹಕ್ಕುಗಳನ್ನು ನೀಡುತ್ತಿಲ್ಲ" ಎಂದು ಅವರು ಆರೋಪಿಸಿದರು.

## ಮನೋರಮಾ ಕಾಲೇಜಿನಲ್ಲಿ ಮಾರ್ಕೆಟಿಂಗ್ ಫೆಸ್ಟ್



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಮನೋರಮಾ ಕಾಲೇಜಿನಲ್ಲಿ ಬಿಬಿಎ ಹಾಗೂ ಬಿಕಾಂ ವಿದ್ಯಾರ್ಥಿಗಳಿಗೆ ಮಾರ್ಕೆಟಿಂಗ್ ಫೆಸ್ಟ್ ಏರ್ಪಡಿಸಲಾಗಿತ್ತು. ಪ್ರೊ. ಚೈತ್ರಾ ಡಿ ಅವರ ನೇತೃತ್ವದಲ್ಲಿ ಹತ್ತು ವಿದ್ಯಾರ್ಥಿಗಳ ಗುಂಪನ್ನು ರಚಿಸಿ ಒಂದೊಂದು ಗುಂಪಿನ ವಿದ್ಯಾರ್ಥಿಗಳು ವ್ಯಾಪರ ವಹಿವಾಟು ಮಾಡಲು ಅಂಗಡಿಗಳನ್ನು ಹಾಕಿ, ವ್ಯವಹಾರ ಜ್ಞಾನ ಬೆಳಸಿಕೊಂಡರು.

ನಿರ್ಣಾಯಕರಾಗಿ ಪ್ರೊ. ರಾಘವೇಂದ್ರ ಮೊದಕ ಹಾಗೂ ರಮ್ಯಾ ಜೋಶಿ ಆಗಮಿಸಿ ವಿದ್ಯಾರ್ಥಿಗಳ ಕಾರ್ಯವೈಖರಿಗೆ ಮನಸೋತು ಬದುಕಿನಲ್ಲಿ ಕಷ್ಟ-ಸುಖ ಸಮನಾಗಿ ಸ್ವೀಕರಿಸುವ ಮನೋಭಾವ ಹೊಂದಿ. ವ್ಯಾಪಾರದಲ್ಲಿ ಲಾಭ-ನಷ್ಟ ಸಹಜವಾಗಿದ್ದು, ಆತ್ಮಸ್ಥೈರ್ಯದಿಂದ ಬದುಕು ಸಾಗಿಸಿ ಎಂದರು.

ಸಂಸ್ಥೆಯ ಚೇರಮನ್ ಎನ್. ಎಮ್. ಕುಡತರಕರ ಅಧ್ಯಕ್ಷತೆ ವಹಿಸಿದ್ದರು. ಪ್ರಾಚಾರ್ಯ ಬಿ.ಎಸ್. ಹೀರೆಮಠ ಮಾತನಾಡಿದರು. ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಸಂಜಯ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಚೈತ್ರಾ ಡಿ, ಪ್ರೊ. ಅಲ್ವೀನಾ ಡಿ, ಪ್ರೊ. ಸವಿತಾ ಪೂಜಾರ, ಪ್ರೊ. ಶಾಹೀದಾ ಶಿರಹಟ್ಟಿ ಸೇರಿದಂತೆ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಎಲ್‌ಐಸಿ ಉಪ ಶಾಖಾಧಿಕಾರಿ ಮಹಾಂತೇಶರಿಗೆ ಬೀಳ್ಕೊಡುಗೆ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜೀವವಿಮಾ ನಿಗಮ ಗದಗ-1 ಶಾಖೆಯ ಕಾರ್ಯಾಲಯದಲ್ಲಿ ಸೇವಾ ಬಡ್ತಿ ಹೊಂದಿ ವರ್ಗಾವಣೆಗೊಂಡ ಉಪ ಶಾಖಾಧಿಕಾರಿ ಮಹಾಂತೇಶರನ್ನು ಸನ್ಮಾನಿಸಿ ಬೀಳ್ಕೊಡಲಾಯಿತು.

ಎಲ್‌ಐಸಿ ಹಿರಿಯ ಶಾಖಾಧಿಕಾರಿ ಎಂ.ಎಚ್. ಭಜಂತ್ರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಹಾಂತೇಶ ಅವರು ಅತಿ ಚಿಕ್ಕ ವಯಸ್ಸಿನಲ್ಲೇ ಮಾತೃ ಸಂಸ್ಥೆಗೆ ಒಳ್ಳೆಯ ಕೆಲಸ ಮಾಡಿ ಧಾರವಾಡ ವಿಭಾಗದಲ್ಲಿ ಗದಗ ಶಾಖೆಯನ್ನು ಉನ್ನತ ಮಟ್ಟದ ಸ್ಥಾನಕ್ಕೆ ಕೊಂಡೊಯ್ಯಲು ಹಗಲಿರಳು ಕೆಲಸ ಮಾಡಿದ್ದಾರೆ. ಸಂಸ್ಥೆ ಇವರ ಕಾರ್ಯವೈಖರಿಯನ್ನು ಮೆಚ್ಚಿ ಬೈಲಹೊಂಗಲ ಶಾಖೆಗೆ ವ್ಯವಸ್ಥಾಪಕರಾಗಿ ನೇಮಿಸಿದೆ. ಇವರ ಕಾರ್ಯ ಹೀಗೆಯೇ ಮುಂದುವರೆಯಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಎಲ್‌ಐಸಿ ಪ್ರತಿನಿಧಿಗಳಾದ ಡಿ.ಸಿ. ಜವಳಿ, ಯಲ್ಲಪ್ಪ ಎಚ್.ಬಾಬರಿ, ಪ್ರಭು ರವದಿ, ಎಸ್.ಎಮ್. ಬಳಿಗಾರ, ಕೆ.ಪಿ. ಅಳವುಂಡಿ, ಜಿ.ಬಿ. ದೂಡ್ಡುರು, ಎನ್.ವಿ. ಮಾಳಿ, ಎಲ್.ಐ. ಪಿಡ್ಡನಗೌಡರ, ಎಂ.ಎಚ್. ಕುಂಬಾರ, ಭರಮಪ್ಪ ಸಾಲಿ, ರಾಜು ಕಾರಡಗಿ, ಡಿ.ಎಚ್. ಗೋಡಬಾಲಿ, ಮರಳುಸಿದ್ದಪ್ಪ ದೊಡ್ಡಮನಿ, ಈರಣ್ಣ ದೋಟಿಕಲ್ಲ, ರಾಜೇಶ್ವರಿ ಕಲಾಲ, ಜ್ಯೋತಿ ಹಾನಗಲ್ಲ ಮುಂತಾದವರಿದ್ದರು.

## ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

▶▶ಮೊದಲನೇ ಪುಟದಿಂದ

/ ವಸತಿ ಶಾಲೆಗಳಿಂದ ಅರ್ಜಿಗಳನ್ನು ಪಡೆದುಕೊಂಡು ಅಗತ್ಯ ದಾಖಲೆಗಳನ್ನು ಲಗತ್ತಿಸಿ ಸಂಬಂಧಿಸಿದ ಮುಖ್ಯೋಪಾಧ್ಯಯರು / ಪ್ರಾಂಶುಪಾಲರಿಂದ ದೃಢೀಕರಿಸಿ ಸಮಾಜ ಕಲ್ಯಾಣ ಇಲಾಖೆ ಕಾರ್ಯಾಲಯಕ್ಕೆ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳನ್ನು ಸೀಟುಗಳ ಲಭ್ಯತೆಯನುಸಾರ ಅರ್ಹತೆಯ ಆಧಾರದ ಮೇಲೆ ಆಯ್ಕೆ ಸಮಿತಿ ಮೂಲಕ ಪ್ರವೇಶ ಒದಗಿಸಲಾಗುವುದು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 31.05.2025 ಆಗಿದ್ದು, ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಶಿರಹಟ್ಟಿ ಇಲ್ಲಿಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ. ಹಾಗೂ ದೂರವಾಣಿ ಸಂಖ್ಯೆ:08487-295097ಕ್ಕೆ ಸಂಪರ್ಕಿಸಬಹುದಾಗಿದೆ.

## ಅರ್ಜಿ ಆಹ್ವಾನ

▶▶ಮೊದಲನೇ ಪುಟದಿಂದ

ಕನಿಷ್ಟ ಎಸ್‌ಎಸ್‌ಎಲ್‌ಸಿ/ 10th ಠಿಚಿ ಕನ್ನಡ ಭಾಷೆ ಓದು ಬರಹ ಜ್ಞಾನ ಹೊಂದಿರಬೇಕು.

18-45 ವರ್ಷ ವಯೋಮಾನದವರಾಗಿರಬೇಕು. ಆಸಕ್ತ ಅಭ್ಯರ್ಥಿಗಳು ತಮ್ಮ ಎಲ್ಲಾ ಅಗತ್ಯ ದಾಖಲಾತಿಯೊಂದಿಗೆ ಮೇ 31 ರ ಸಂಜೆ 5:00 ಗಂಟೆಯ ಒಳಗಾಗಿ ನಿಗದಿತ ಅರ್ಜಿ ನಮೂನೆ ಪಡೆದು ಮಾಹಿತಿ ಭರ್ತಿ ಮಾಡಿ ಖುದ್ದಾಗಿ ಮುಖ್ಯಾಧಿಕಾರಿಗಳು ಪುರಸಭೆ ರೋಣ ವಿಳಾಸಕ್ಕೆ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು.

ಅರ್ಜಿ ಹಾಗೂ ಹೆಚ್ಚಿನ ವಿವರಗಳಿಗಾಗಿ ರೋಣ ಪುರಸಭೆಯ ಆರೋಗ್ಯ ಶಾಖೆಯನ್ನು ಸಂಪರ್ಕಿಸಬಹುದಾಗಿದೆ.

## ದಾಖಲಾತಿಗೆ ಜೂನ್ 5 ಕೊನೆಯ ದಿನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಡಿ.ಇ.ಎಲ್.ಇಡಿ, ಡಿ.ಪಿ.ಇ.ಡಿ ಡಿ.ಪಿ.ಎಸ್.ಇ ಕೋರ್ಸಿನ ಸರಕಾರಿ ಕೋಟಾದ ಉಳಿಕೆ ಸೀಟುಗಳನ್ನು ಆಡಳಿತ ಮಂಡಳಿಯವರು ದಾಖಲಾತಿ ಮಾಡಿಕೊಳ್ಳಲು ಜೂನ್ 5 ರಂದು ಕೊನೆಯ ದಿನಾಂಕವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ. ಶಾಲಾ ಶಿಕ್ಷಣ ವೆಬ್‌ಸೈಟ್ ನಲ್ಲಿ ಸಂಪರ್ಕಿಸಿ ಹಾಗೂ ಶ್ರೀ ಜಿ ಎಂ ಮುಂದಿನಮನಿ ನೋಡಲ್ ಅಧಿಕಾರಿಗಳು ಡಯಟ್ ಗದಗ ಮೊಬೈಲ್‌ಸಂ: 7619277145 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಕೋರ ಸಾಹಿತ್ಯ ವಿಚಾರ ವೇದಿಕೆಯ ಉದ್ಘಾಟನಾ ಸಮಾರಂಭ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸಾಹಿತ್ಯ ಅಕಾಡೆಮಿ ಬೆಂಗಳೂರು, ಚಕೋರ ಸಾಹಿತ್ಯ ವಿಚಾರ ವೇದಿಕೆ ಗದಗ

ಹಾಗೂ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಇವರ ಸಹಯೋಗದಲ್ಲಿ ಚಕೋರ ಸಾಹಿತ್ಯ ವಿಚಾರ ವೇದಿಕೆಯ ಉದ್ಘಾಟನಾ ಸಮಾರಂಭ ಮೇ. 17ರ ಸಾಯಂಕಾಲ 6.30 ಗಂಟೆಗೆ ಗದಗ ನಗರದ ತೆ-ೞಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯದಲ್ಲಿ ಜರುಗಲಿದೆ.

ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಸುಧಾ ಹುಚ್ಚಣ್ಣವರ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಕ.ಸಾ.ಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸಲಿದ್ದು, ಕೆ.ಎಲ್.ಇ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ವಿದ್ಯಾಲಯದ ಡಾ.ಅಂದಯ್ಯ ಅರವಟಗಿಮಠ ವಿಶೇಷ ಉಪನ್ಯಾಸ ನೀಡುವರು. ತುಮಕೂರು ಜಿಲ್ಲಾ ಕ.ಸಾ.ಪ ಅಧ್ಯಕ್ಷ ಡಾ. ಜಿ.ಬಿ. ಪಾಟೀಲ, ಸಿದ್ಧಲಿಂಗಪ್ಪ ಕೆ.ಎಸ್, ಕರ್ನಾಟಕ ಸಾಹಿತ್ಯ ಅಕಾಡೆಮಿಯ ಡಾ. ಅರ್ಜುನ ಗೊಳಸಂಗಿ, ಚಕೋರ ಸಾಹಿತ್ಯ ವೇದಿಕೆ ಸಂಚಾಲಕರಾದ ಶಿಲ್ಪಾ ಮ್ಯಾಗೇರಿ, ಎಸ್.ಯು. ಸಜ್ಜನಶೆಟ್ಟರ, ಕರ್ನಾಟಕ ಸಾಹಿತ್ಯ ಅಕಾಡೆಮಿ ರಿಜಿಸ್ಟ್ರಾರ್ ಕರಿಯಪ್ಪ ಎನ್, ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್. ಎನ್. ಮುಕುಂದರಾಜ್ ಪಾಲ್ಗೊಳ್ಳಲಿದ್ದಾರೆ ಎಂದು ಅರ್ಜುನ ಗೊಳಸಂಗಿ ಮತ್ತು ಎಸ್.ಯು. ಸಜ್ಜನಶೆಟ್ಟರ್ ಪತ್ರಿಕಾ ಪ್ರಕಟಣೆಗೆ ತಿಳಿಸಿದ್ದಾರೆ.

## ಬೇಸಿಗೆ ಶಿಬಿರದ ಮಕ್ಕಳಿಂದ ಹೊರಸಂಚಾರ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿ ಹಾಗೂ ಜ್ಞಾನಗಂಗಾ ಸೇವಾ ಪ್ರತಿಷ್ಠಾನ ಇವುಗಳ ಸಂಯುಕ್ತಾಶ್ರಯದಲ್ಲಿ 30 ದಿನಗಳ ಕಾಲ ನಡೆದ ಬೇಸಿಗೆ ಶಿಬಿರದ ಮಕ್ಕಳಿಗೆ ಒಂದು ದಿನದ ಹೊರಸಂಚಾರವನ್ನು ಕೈಗೊಳ್ಳಲಾಯಿತು.

ಜ್ಞಾನಗಂಗಾ ಸೇವಾ ಪ್ರತಿಷ್ಠಾನದ ಸಂಸ್ಥಾಪಕರು ಹಾಗೂ ಎಂ.ಬಿ. ಹುಯಿಲಗೋಳ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಗಂಗೂಬಾಯಿ ಪವಾರ, ವಿ.ಡಿ.ಎಸ್ ಕ್ಲಾಸಿಕ್ ಆಂಗ್ಲ ಮಾಧ್ಯಮ ಸಿಬಿಎಸ್‌ಇ ಶಾಲೆಯ ಪ್ರಾಚಾರ್ಯ ಎಂ.ಆರ್. ಡೊಳ್ಳಿನ ಶಾಲಾ ವಾಹನಕ್ಕೆ ಪೂಜೆ ಸಲ್ಲಿಸಿ ಮಕ್ಕಳಿಗೆ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಪಿ.ಎಚ್. ಕಡಿವಾಳ, ಎಸ್. ವಾಯ್, ಕಠಾರಿ, ಶಶಿಧರ ಹೊಸಳ್ಳಿ, ಬೇಸಿಗೆ ಶಿಬಿರದ ಶಿಕ್ಷಕರು, ಸಿಬ್ಬಂದಿ ವರ್ಗದವರು, ಪಾಲಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಸುಪ್ರೀಂ ಕೋರ್ಟ್‌ಗೆ 14 ಪ್ರಶ್ನೆಗಳನ್ನು ಕೇಳಿದ ರಾಷ್ಟ್ರಪತಿ

# ಮಸೂದೆ ಅನುಮೋದನೆಗೆ ಗಡುವು

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ರಾಜ್ಯ ವಿಧಾನಸಭೆಗಳು ಅಂಗೀಕರಿಸಿದ ಮಸೂದೆಗಳ ಕುರಿತು ತೀರ್ಮಾನ ತೆಗೆದುಕೊಳ್ಳಲು ರಾಜ್ಯಪಾಲರು ಮತ್ತು ರಾಷ್ಟ್ರಪತಿಗೆ ಗಡುವು ನಿಗದಿಪಡಿಸಿದ ಏಪ್ರಿಲ್ 8ರ ತೀರ್ಪಿನ ಕುರಿತು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸುಪ್ರೀಂ ಕೋರ್ಟ್‌ಗೆ 14 ನಿರ್ಣಾಯಕ ಪ್ರಶ್ನೆಗಳನ್ನು ಕೇಳಿದ್ದಾರೆ.

ಅಪರೂಪಕ್ಕೆ ಬಳಸಲಾಗುವ ಸಂವಿಧಾನದ ವಿಧಿ 143 (1) ರ ಅಡಿಯಲ್ಲಿ ತಮ್ಮ ಅಧಿಕಾರವನ್ನು ಚಲಾಯಿಸುತ್ತಾ, ರಾಷ್ಟ್ರಪತಿ ಮುರ್ಮು ಅವರು ಪ್ರಸ್ತುತ ಸಂದರ್ಭಗಳಲ್ಲಿ, ಈ ಕೆಳಗಿನ ಕಾನೂನಿನ ಪ್ರಶ್ನೆಗಳು ಉದ್ಭವಿಸಿವೆ ಎಂದು ತೋರುತ್ತದೆ ಮತ್ತು ಅವುಗಳ ಸ್ವರೂಪ ಸಾರ್ವಜನಿಕ ಪ್ರಾಮುಖ್ಯತೆಯನ್ನು ಹೊಂದಿವೆ. ಅದರ ಬಗ್ಗೆ ಸುಪ್ರೀಂ ಕೋರ್ಟ್‌ನ ಅಭಿಪ್ರಾಯವನ್ನು ಪಡೆಯುವುದು ಸೂಕ್ತವಾಗಿದೆ ಎಂದು ಹೇಳಿದ್ದಾರೆ.

ಸಂವಿಧಾನದ 143 (1) ನೇ ವಿಧಿಯು ರಾಷ್ಟ್ರಪತಿ ಸುಪ್ರೀಂ ಕೋರ್ಟ್‌ನೊಂದಿಗೆ ಸಮಾಲೋಚನೆ ನಡೆಸುವ ಅಧಿಕಾರದ ಬಗ್ಗೆ ಹೇಳುತ್ತದೆ. "ಯಾವುದೇ ಸಮಯದಲ್ಲಿ ಕಾನೂನು ಅಥವಾ ವಾಸ್ತವದ ಪ್ರಶ್ನೆ ಉದ್ಭವಿಸಿದೆ ಅಥವಾ ಉದ್ಭವಿಸುವ ಸಾಧ್ಯತೆ ಇದೆ ಎಂದು ರಾಷ್ಟ್ರಪತಿಗಳಿಗೆ ಕಂಡುಬಂದರೆ, ಅದು ಅಂತಹ ಸ್ವರೂಪದ್ದಾಗಿದ್ದು ಮತ್ತು ಸಾರ್ವಜನಿಕ ಪ್ರಾಮುಖ್ಯತೆಯನ್ನು ಹೊಂದಿದ್ದು, ಅದರ ಬಗ್ಗೆ ಸುಪ್ರೀಂ ಕೋರ್ಟ್‌ನ ಅಭಿಪ್ರಾಯವನ್ನು ಪಡೆಯುವುದು ಸೂಕ್ತವಾಗಿದ್ದರೆ, ರಾಷ್ಟ್ರಪತಿ ಆ ಪ್ರಶ್ನೆಯನ್ನು ಪರಿಗಣನೆಗೆ ನ್ಯಾಯಾಲಯಕ್ಕೆ ಉಲ್ಲೇಖಿಸಬಹುದು. ನ್ಯಾಯಾಲಯವು ಸೂಕ್ತವೆಂದು ಭಾವಿಸುವ ವಿಷಯದ ಬಗ್ಗೆ ತನ್ನ ಅಭಿಪ್ರಾಯವನ್ನು ರಾಷ್ಟ್ರಪತಿಗೆ ವರದಿ ಮಾಡಬಹುದು" ಎಂದು ನಿಬಂಧನೆ ಹೇಳುತ್ತದೆ.




ಲಕ್ಷ್ಮೇಶ್ವರ ಪಟ್ಟಣದ ಶಿಗ್ಲಿ ಕ್ರಾಸ್ ಬಳಿ ಗುರುವಾರ ಮುಂಜಾನೆ ಸಾರಿಗೆ ಬಸ್ ಚಾಲಕನ ನಿಯಂತ್ರಣ ತಪ್ಪಿ ಹೋಟೆಲ್ ನಾಮಫಲಕ್ಕೆ ಬಡಿದು ನಿಂತಿದ್ದು, ಅದೃಷ್ಟವಶಾತ್ ಯಾವುದೇ ಅನಾಹುತ ಸಂಭವಿಸಿಲ್ಲ. ಮುಂಜಾನೆ 9 ಗಂಟೆಯ ಸುಮಾರಿಗೆ ಈ ಘಟನೆ ನಡೆದಿದ್ದು, ಬಸ್‌ನ್ನು ಚಾಲಕ ರಸ್ತೆಯ ಎಡಬದಿಗೆ ತೆಗೆದುಕೊಳ್ಳುವಾಗ ನಿಯಂತ್ರಣ ತಪ್ಪಿದೆ. ಈ ಸಂದರ್ಭದಲ್ಲಿ ಹೋಟೆಲ್ ಬಳಿ ಜನಸಂಚಾರ ಇರದೆ ಇದ್ದುದರಿಂದ ಯಾವುದೇ ಅನಾಹುತ ನಡೆದಿಲ್ಲ.

# ಕಮ್ಯುನಿಟಿ ಮೊಬೆಲೈಜರ್ ಹುದ್ದೆಗೆ ಅರ್ಜಿ ಆಹ್ವಾನ

■ **ವಿಜಯಸಾಕ್ಷಿ ಸುದ್ದಿ, ಗದಗ**

ಮುಂಡರಗಿ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0ರ ಅಡಿಯಲ್ಲಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ನಲ್ಮ್ ಡೆ ಯೋಜನೆಯ ಸ್ವಸಹಾಯ ಸದಸ್ಯರುಗಳನ್ನು ಕಮುನಿಟಿ ಮೊಬೆಲೈಜರ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದ್ದು, ಈ ಕೆಳಗಿನ ಅರ್ಹತೆ ಮತ್ತು ಆಸಕ್ತಿ ಇರುವ ಅಭ್ಯರ್ಥಿಗಳು ತಮ್ಮ ಎಲ್ಲಾ ಅಗತ್ಯ ದಾಖಲಾತಿಯೊಂದಿಗೆ ಮ ಮೇ 31ರ ಸಂಜೆ 5 ಗಂಟೆಯ ಒಳಗಾಗಿ ನಿಗದಿತ ಅರ್ಜಿ ನಮೂನೆ ಪಡೆದು ಮಾಹಿತಿಯನ್ನು ಭರ್ತಿ ಮಾಡಿ ಖುದ್ದಾಗಿ ಮುಖ್ಯಾಧಿಕಾರಿಗಳಿಗೆ ದ್ವಿಪ್ರತಿಯಲ್ಲಿ ಸಲ್ಲಿಸಬೇಕು.

ಕಮ್ಯುನಿಟಿ ಮೊಬೆಲೈಜರ್ ಹುದ್ದೆಗಳ ಸಂಖ್ಯೆ 5, ಮಾಸಿಕ ಗೌರವಧನ ಪ್ರತಿ ಅಭ್ಯರ್ಥಿಗೆ–ರೂ.17,953, ವಿದ್ಯಾರ್ಹತೆ ಕನಿಷ್ಠ ಹತ್ತನೇ ತರಗತಿ ಪಾಸ್ ಆಗಿರಬೇಕು, ಕನ್ನಡ ಭಾಷೆ ಓದು–ಬರಹ ಜ್ಞಾನ ಹೊಂದಿರಬೇಕು, 18ರಿಂದ 45 ವರ್ಷ ವಯೋಮಾನದವರಾಗಿರಬೇಕು, ನಲ್ಮ್ ಡೇ ಯೋಜನೆಯ ಸ್ವಸಹಾಯ ಸಂಘದ ಸಕ್ರಿಯ ಸದಸ್ಯರಾಗಿರಬೇಕು.

ಅರ್ಜಿಯೊಂದಿಗೆ ಇತ್ತೀಚಿನ 4 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು, ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ, ಪಾನ್ ಕಾರ್ಡ್, ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲಾತಿಗಳು, ಕಂಪ್ಯೂಟರ್ ತರಬೇತಿ ಹೊಂದಿದ ಬಗ್ಗೆ ಪ್ರಮಾಣಪತ್ರ, ಡೇ–ನಲ್ಮ್ ಯೋಜನೆಯ ಸ್ವ–ಸಹಾಯ ಸಂಘದ ಸದಸ್ಯರಾಗಿರುವ ಬಗ್ಗೆ ಸಂಘದ ಪ್ರಮಾಣಪತ್ರ, ರಾಷ್ಟ್ರೀಕೃತ ಬ್ಯಾಂಕ್ ಪಾಸ್‌ಬುಕ್ ಪ್ರತಿ, ಅನುಭವ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

**ಜಿಲ್ಲೆಯ ರೈತಬಾಂಧವರಿಗೆ ಜಂಟಿ ಕೃಷಿ ನಿರ್ದೇಶಕರ ಸಲಹೆ**

# ಸಮತೋಲಿತ ರಸಗೊಬ್ಬರ ಬಳಕೆ ಮಾಡಿ

■ **ವಿಜಯಸಾಕ್ಷಿ ಸುದ್ದಿ, ಗದಗ**



ಶಿಫಾರಸ್ಸಿನಂತೆ ಬೆಳೆಗಳಿಗೆ ಸಾರಜನಕ : ರಂಜಕ : ಪೊಟ್ಯಾಷ್ ರಸಗೊಬ್ಬರಗಳನ್ನು 4:2:1 ರ ಅನುಪಾತದಲ್ಲಿ ಬಳಸಬೇಕಾಗಿರುತ್ತದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ರೈತರು ಬಳಸುತ್ತಿರುವ ರಸಗೊಬ್ಬರಗಳ ಅನುಪಾತವು 5:3:1 ಆಗಿರುತ್ತದೆ. ರೈತರಲ್ಲಿ ಸಮತೋಲನಾತ್ಮಕ ರಸಗೊಬ್ಬರ ಬಳಕೆಯನ್ನು ಉತ್ತೇಜಿಸಲು ಪೊಟ್ಯಾಷ್ ಯುಕ್ತ ಕಾಂಪ್ಲೆಕ್ಸ್ ರಸಗೊಬ್ಬರಗಳ ಬಳಕೆ ಅತೀ ಮುಖ್ಯವಾಗಿರುತ್ತದೆ.

ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ 17 ಪೋಷಕಾಂಶಗಳ ಅಗತ್ಯವಿರುತ್ತದೆ. ಇವುಗಳಲ್ಲಿ ಇಂಗಾಲ, ಜಲಜನಕ ಮತ್ತು ಆಮ್ಲಜನಕವು ಸ್ವಾಭಾವಿಕವಾಗಿ ದೊರೆಯಲಿದ್ದು, ಗಾಳಿ ಮತ್ತು ನೀರಿನ ಮೂಲಕ ಸಸ್ಯಗಳಿಗೆ ಲಭ್ಯವಾಗುತ್ತದೆ. ಉಳಿದ 14 ಪೋಷಕಾಂಶಗಳು ಕಡಿಮೆ ಪ್ರಮಾಣದಲ್ಲಿ ಬೇಕಿದ್ದು, ಇವುಗಳನ್ನು ಲಘು ಪೋಷಕಾಂಶಗಳೆಂದು ವಿಂಗಡಿಸಲಾಗಿದೆ. ಇವುಗಳಲ್ಲಿ ಯಾವುದೇ ಒಂದು ಪೋಷಕಾಂಶದ ಕೊರತೆಯಾದರೂ ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಯ ಮೇಲೆ ಪರಿಣಾಮ ಬೀರಿ ಇಳುವರಿ ಕುಂಠಿತವಾಗುತ್ತದೆ.

ಪ್ರಧಾನ ಪೋಷಕಾಂಶಗಳು ಮತ್ತು ಲಘು ಪೋಷಕಾಂಶಗಳಿಗೆ ಭೂಮಿಯೇ ಮುಖ್ಯ ಆಧಾರ. ಮಣ್ಣಿನಿಂದ ಈ ಎಲ್ಲಾ ಪೋಷಕಾಂಶಗಳು ಬೆಳಗಳಿಗೆ ಬೇಕಾದ ಪ್ರಮಾಣದಲ್ಲಿ ದೊರೆಯುವುದಿಲ್ಲವಾದ್ದರಿಂದ ಬಾಹ್ಯವಾಗಿ ನೀಡುವುದು ಅನಿವಾರ್ಯ, ಬೆಳೆಗಳಿಗೆ ಬೇಕಾಗುವ ಈ ಬಾಹ್ಯ ಪೋಷಕಾಂಶಗಳನ್ನು ಸಾವಯವ ಮತ್ತು ರಸಗೊಬ್ಬರಗಳಿಂದ ಒದಗಿಸಬೇಕಾಗಿದ್ದು, ರಸಗೊಬ್ಬರಗಳಲ್ಲಿ ಪೋಷಕಾಂಶಗಳು ಹೆಚ್ಚಿನ ಪ್ರಮಾಣದಲ್ಲಿ ಮತ್ತು ನೇರವಾಗಿ ದೊರೆಯುವ ರೂಪದಲ್ಲಿದ್ದು, ಅವುಗಳ ಬಳಕೆ ಅತ್ಯಗತ್ಯವಾಗಿದೆ. ರೈತರು ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯ ಹಾಗೂ ಡಿ.ಎ.ಪಿ.ಯನ್ನು ರೂಢಿಗತವಾಗಿ ಬಳಸುತ್ತಿದ್ದು, ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರವಿರುತ್ತದೆ. ಆದರೆ ಬೆಳೆಗಳಿಗೆ ಬರ ಮತ್ತು ರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಾಷ್ ಲಭ್ಯವಿರುವುದಿಲ್ಲ. ಮಾರುಕಟ್ಟೆಯಲ್ಲಿ ವಿವಿಧ ಶ್ರೇಣಿಯ ಸಾರಜನಕ, ರಂಜಕ ಮತ್ತು ಪೊಟ್ಯಾಷ್ ಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿದ್ದು, ಶಿಫಾರಸ್ಸಿನಂತೆ ವಿವಿಧ ರಸಗೊಬ್ಬರಗಳ ಸಂಯೋಜನೆಯೊಂದಿಗೆ ಬಳಸಬಹುದಾಗಿದೆ. ಅಲ್ಲದೇ, ರೈತರು ರಸಗೊಬ್ಬರವನ್ನು ಕೇವಲ ಒಂದೇ ಸಂಸ್ಥೆಯ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೆ, ಡಿ.ಎ.ಪಿ. ರಸಗೊಬ್ಬರಕ್ಕೆ ಪರ್ಯಾಯವಾಗಿ ಗಂಧಕ ಒದಗಿಸುವ 20:20:0:13 ಬಳಕೆಯಿಂದ ಎಣ್ಣೆ ಕಾಳು ಬೆಳೆಗಳಲ್ಲಿ ಕಾಳಿನ ಗಾತ್ರ ಹೆಚ್ಚಾಗಿ ಉತ್ತಮ ಇಳುವರಿ ಪಡೆಯಲು ಸಾಧ್ಯವಾಗುತ್ತದೆ. ಆದ್ದರಿಂದ, ಕೇವಲ ಒಂದೇ ಸಂಸ್ಥೆಯ ಹಾಗೂ ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಮತ್ತು ಡಿ.ಎ.ಪಿ. ರಸಗೊಬ್ಬರಗಳನ್ನು ಬಳಕೆ ಮಾಡುವ ಬದಲು ಬರ ಮತ್ತು ರೋಗ ನಿರೋಧಕ ಶಕ್ತಿ ನೀಡಿ, ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಾಷ್ ಯುಕ್ತ ವಿವಿಧ ಶ್ರೇಣಿಯ ರಸಗೊಬ್ಬರಗಳ ಶಿಫಾರಸ್ಸಿನ ಪ್ರಮಾಣದಲ್ಲಿ ಸಮತೋಲನಾತ್ಮಕವಾಗಿ ಬಳಕೆ ಮಾಡುವುದರ ಮೂಲಕ ಉತ್ತಮ ಇಳುವರಿ ಪಡೆಯಲು ಹಾಗೂ ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಬೇಕೆಂದು ಜಂಟಿ ಕೃಷಿ ನಿರ್ದೇಶಕರು ವಿನಂತಿಸಿದ್ದಾರೆ.

# ತಂತ್ರಜ್ಞಾನ ಬಳಕೆ ಕುರಿತು ಗುಂಪು ಚರ್ಚೆ

■ **ವಿಜಯಸಾಕ್ಷಿ ಸುದ್ದಿ, ಗದಗ**



ನಗರದ ಮನೋರಮಾ ಕಾಲೇಜಿನ ಬಿ.ಸಿ.ಎ ವಿದ್ಯಾರ್ಥಿಗಳಿಂದ ತಂತ್ರಜ್ಞಾನ ಬಳಕೆ ಕುರಿತು ಗುಂಪು ಚರ್ಚಾ ಕೂಟವನ್ನು ಏರ್ಪಡಿಸಲಾಗಿತ್ತು. ವಿದ್ಯಾರ್ಥಿಗಳಿಗೆ ತಂತ್ರಜ್ಞಾನದ ಬಳಕೆಯಿಂದಾಗುವ ಅನುಕೂಲ – ಅನಾನೂಕೂಲಗಳ ಬಗ್ಗೆ ವಿಮರ್ಶಾತ್ಮಕವಾಗಿ ಚರ್ಚಿಸಲು ಮುಕ್ತ ಅವಕಾಶ ನೀಡಲಾಗಿತ್ತು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಪ್ರೊ. ಚೈತ್ರಾ ಚೌಗಲೆ ಮಾತನಾಡಿ, ವಿದ್ಯಾರ್ಥಿಗಳು ಶಿಸ್ತು ಹಾಗೂ ಬದ್ಧತೆಯಿಂದ ತಂತ್ರಜ್ಞಾನ ಬಳಕೆ ಮಾಡಿದಲ್ಲಿ ಸಾಧನೆಯತ್ತ ಸಾಗಬಹುದು. ಆದ್ದರಿಂದ ತಾವೆಲ್ಲ ಇತಿಮಿತಿಯಿಂದ ತಂತ್ರಜ್ಞಾನ ಬಳಕೆ ಮಾಡಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಿ ಎಂದು ಶುಭ ಹಾರೈಸಿದರು.

ಬಿಸಿಎ ಸಂಯೋಜಕರಾದ ಪ್ರೊ. ಸವಿತಾ ಪೂಜಾರ ವಿದ್ಯಾರ್ಥಿಗಳ ಗುಂಪುಗಳನ್ನು ರಚಿಸುವುದರ ಮೂಲಕ ವಿವಿಧ ವಿಷಯಗಳ ಮೇಲೆ ಆಶುಭಾಷಣ ಸ್ಪರ್ಧೆ ಏರ್ಪಡಿಸಿ ಪ್ರೋತ್ಸಾಹಿಸಿದರು.

ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿದರು. ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ ವಹಿಸಿದ್ದರು. ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಕಾರ್ಯದರ್ಶಿಗಳಾದ ಮಂಜುನಾಥ ಕುಡತರಕರ, ಸಂಜಯ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಸವಿತಾ ಪೂಜಾರ, ಪ್ರೊ. ಚೈತ್ರಾ ಡಿ, ಪ್ರೊ. ಅಲ್ವಿನಾ ಡಿ, ಪ್ರೊ. ಶಾಹಿದಾ ಶಿರಹಟ್ಟಿ ಮುಂತಾದವರಿದ್ದರು.

# ರಾಜ್ಯ ಮಟ್ಟಕ್ಕೆ ಆಯ್ಕೆ

■ **ವಿಜಯಸಾಕ್ಷಿ ಸುದ್ದಿ, ಗದಗ**



ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ನವನಗರ ಹುಬ್ಬಳ್ಳಿ ಇವರು ಆಯೋಜಿಸಿದ್ದ ಅಂತರ ವಲಯ ಯುವಜನೋತ್ಸವ ಸ್ಪರ್ಧೆ–2025ರಲ್ಲಿ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಕಾನೂನು ಮಹಾವಿದ್ಯಾಲಯದ ಕಾನೂನು ವಿದ್ಯಾರ್ಥಿಗಳಾದ ರಮೇಶ ಗುರಿಕಾರ, ಪ್ರೇಮಲೇಖಾ ಜೀನೂರ, ರೋಜಾ ಮುಗಳಿ, ಪರಶುರಾಮ ಕಳಗಣ್ಣನವರ, ಶೇಖರಪ್ಪ ಈಳಗೇರ, ಮಂಜುನಾಥ ದೇಸಾಯಿ ಭಾಗವಹಿಸಿ ಹಾಸ್ಯ ನಾಟಕದಲ್ಲಿ ಪ್ರಥಮ ಬಹುಮಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳನ್ನು ಮಹಾವಿದ್ಯಾಲಯದ ಆಡಳಿತ ವರ್ಗ, ಪ್ರಾಂಶುಪಾಲರು, ಉಪನ್ಯಾಸಕರು, ಸಿಬ್ಬಂದಿಗಳು, ಹೆಚ್.ಸಿ.ಇ.ಎಸ್. ಕಾನೂನು ಮಹಾವಿದ್ಯಾಲಯದ ವಿದ್ಯಾರ್ಥಿ ವಿದ್ಯಾರ್ಥಿನಿಯರು ಮತ್ತು ಸಾಂಸ್ಕೃತಿಕ ವಿಭಾಗದ ಸಂಯೋಜಕರು ಶುಭ ಕೋರಿದ್ದಾರೆ.

# ದೇವಸ್ಥಾನ ಅಭಿವೃದ್ಧಿ ಕುರಿತು ಸಚಿವರಿಗೆ ಮನವಿ

■ **ವಿಜಯಸಾಕ್ಷಿ ಸುದ್ದಿ, ಗದಗ**


ಶಿರಹಟ್ಟಿ ತಾಲೂಕಿನ ವರವಿ ದೇವಸ್ಥಾನದ ಪ್ರಾಂಗಣದಲ್ಲಿ ಶ್ರೀ ಜಗದ್ಗುರು ಮೌನೇಶ್ವರ ದೇವಸ್ಥಾನ, ಮಠದ ವಿಕಾಸ ಟ್ರಸ್ಟ್ ಕಮಿಟಿ (ವರವಿ) ಹಾಗೂ ವಿಶ್ವಕರ್ಮ ಮಹಾ ಒಕ್ಕೂಟ ಬೆಂಗಳೂರು ರಾಜ್ಯ ಘಟಕದ ವತಿಯಿಂದ ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ರಾಜಾ ವೇಣುಗೋಪಾಲ ನಾಯಕ ಹಾಗೂ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಡಾ. ಚಂದ್ರು ಲಮಾಣಿ ಅವರಿಗೆ ಅಭಿನಂದನಾ ಕಾರ್ಯಕ್ರಮ ಮೇ 17ರಂದು ಬೆಳಿಗ್ಗೆ 11ಕ್ಕೆ ಜರುಗಲಿದೆ.

ವರವಿ ದೇವಸ್ಥಾನ ಹಾಗೂ ತಿಂಥಣಿ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿ ಕುರಿತಾದ ವಿಚಾರಗಳ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರೊಂದಿಗೆ ಮಾಹಿತಿ ಹಂಚಿಕೊಳ್ಳುವುದರ ಜೊತೆಗೆ ಸಮಸ್ತ ವಿಶ್ವಕರ್ಮ ಸಮುದಾಯದಿಂದ ಮನವಿ ನೀಡಿ ವಿನಂತಿಸಲಾಗುತ್ತದೆ.

ಅಲ್ಲದೇ, ವಿಶ್ವಕರ್ಮ ಮಹಾ ಒಕ್ಕೂಟದ ರಾಜ್ಯಾಧ್ಯಕ್ಷ ವಿಜಯಕುಮಾರ ಹಾಗೂ ರಾಜ್ಯ ಪದಾಧಿಕಾರಿಗಳು ಉಪಸ್ಥಿತರಿರುವರು ಎಂದು ಶ್ರೀ ಜಗದ್ಗುರು ಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಅಧ್ಯಕ್ಷ ಮೋಹನ ನರಗುಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಛಾಯಾಚಿತ್ರ ಪ್ರದರ್ಶನ ನಾಳೆ

■ **ವಿಜಯಸಾಕ್ಷಿ ಸುದ್ದಿ, ಗದಗ**



ಗದುಗಿನ ಲಯ ಕಲಾ ಮನೆ ಕಲಾವಿದರ ಸಾಂಸ್ಕೃತಿಕ ಸಂಸ್ಥೆ, ಮುಂಡರಗಿಯ ಗ್ರಾಮ ದೇವತೆ ದ್ಯಾಮಮ್ಮ ದೇವಿ ದೊಡ್ಡಾಟ, ಕಲಾಮೇಳ ಇವರ ಸಹಕಾರದೊಂದಿಗೆ ಚಿತ್ರ–ರಂಗ ಸಂಭ್ರಮ ಹಾಗೂ ಲಯ ಕಲಾ ಮನೆಯ 32ನೇ ವಾರ್ಷಿಕೋತ್ಸವ ಅಂಗವಾಗಿ ಮೇ. 17ರಂದು ಗದುಗಿನ ಚಿತ್ರಕಲಾವಿದ ಶಂಕರಗೌಡ ಪಾಟೀಲ ಇವರು ಸಂಗ್ರಹಿಸಿರುವ ರಂಗಭೂಮಿ ಕಲಾವಿದರ ಅಪರೂಪದ ಹಳೆಯ ಛಾಯಾಚಿತ್ರ ಹಾಗೂ ಲೇಖನಗಳ 77ನೇ ಪ್ರದರ್ಶನ ಏರ್ಪಡಿಸಲಾಗಿದೆ.

ಲಯ ಕಲಾ ಮನೆ ಸಂಸ್ಥೆಯ ದಿ. ಎಂ.ಎ. ಚೆಟ್ಟಿ ಗದಗ, ದಿ. ಶಂಕರಗೌಡ ಬೆಟದೂರ ರಾಯಚೂರ, ದಿ. ವ್ಹಿ.ಬಿ. ಹಿರೇಗೌಡ್ರ ದಾವಣಗೇರಿ, ದಿ. ಎನ್.ಎ. ಹರ್ಲಾಪೂರ ಗದಗ, ಅನಂತಯ್ಯ ಹೈದರಾಬಾದ, ದಿ. ಶಂಕರ ಪಾಟೀಲ ದಾವಣಗೇರಿ, ಸಿ.ಎಸ್. ಸಂಗಾ ದಾವಣಗೇರಿ, ಎಮ್.ಆರ್. ಬಾಳಿಕಾಯಿ ಧಾರವಾಡ, ಎನ್.ಕೆ. ಹಾಲಕೇರಿ ಧಾರವಾಡ, ಚಿ.ಸು. ಕೃಷ್ಣಶೆಟ್ಟಿ ಬೆಂಗಳೂರು, ಡಾ. ಎಂ.ವ್ಹಿ. ಆಚಾರ್ಯ ಗದಗ, ಕೃಷ್ಣ ದೇವಾಡಿಗೆ ಬೆಂಗಳೂರು, ಶಂಕರಗೌಡ ಪಾಟೀಲ ಗದಗ, ಬಿ.ಕೆ. ಅಜ್ಜಯ್ಯ ದಾವಣಗೇರಿ, ರಾಜೇಶ ಆರ್. ಎಸ್. ಶಿವಮೊಗ್ಗ, ಸಂತೋಷ ಕುಲಕರ್ಣಿ ದಾವಣಗೇರಿ ಕಲಾವಿದರ ಕಲಾಕೃತಿಗಳು ಪ್ರದರ್ಶನಗೊಳ್ಳುವವು.

ಈ ಪ್ರದರ್ಶನಗಳ ಉದ್ಘಾಟನೆಯನ್ನು ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ನೆರವೇರಿಸುವರು ಎಂದು ಪ್ರಕಟಣೆ ತಿಳಿಸಿದೆ.

# ವಿವಿಧ ಕಾಮಗಾರಿಗಳ ಭೂಮಿಪೂಜೆ ನಾಳೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಶಿರಹಟ್ಟಿ ಮೀಸಲು ವಿಧಾನಸಭಾ ಕ್ಷೇತ್ರದ ವಿವಿಧ ಕಾಮಗಾರಿಗಳಿಗೆ ಮೇ 17ರಂದು ಬೆಳಿಗ್ಗೆ 10 ಗಂಟೆಗೆ ಶಿರಹಟ್ಟಿ ಪಟ್ಟಣದ ಸಾರ್ವಜನಿಕ ಬಸ್ ನಿಲ್ದಾಣದ ಎದುರುಗಡೆ ಭೂಮಿಪೂಜೆ ಕಾರ್ಯಕ್ರಮ ನೆರವೇರಲಿದೆ.

ಶಿರಹಟ್ಟಿ ಪಟ್ಟಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಸಮುದಾಯ ಭವನ, ಡಾ. ಬಾಬು ಜಗಜೀವನರಾಂ ಸಮುದಾಯ ಭವನ, ಡಾ. ಬಿ.ಆರ್. ಅಂಬೇಡ್ಕರ್ ಸಮುದಾಯ ಭವನ, ಲಕ್ಷ್ಮೇಶ್ವರದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಸಮುದಾಯ ಭವನ, ಮುಂಡರಗಿ ತಾಲೂಕು ಹಮ್ಮಿಗಿ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣ, ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣ, ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಹೈಮಾಸ್ಟ್ ದೀಪ ಅಳವಡಿಸುವ ಕಾಮಗಾರಿಗಳ ಭೂಮಿಪೂಜೆ ಜರುಗಲಿದೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್ ಮುಂತಾದವರು ಪಾಲ್ಗೊಳ್ಳುವರು.

# ಚಂದನ ಶಾಲೆಗೆ ಉತ್ತಮ ಫಲಿತಾಂಶ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಿಬಿಎಸ್‌ಇ ಪಠ್ಯಕ್ರಮದ ಎಸ್‌ಎಸ್‌ಎಲ್‌ಸಿ ಫಲಿತಾಂಶ ಪ್ರಕಟವಾಗಿದ್ದು, ಪಟ್ಟಣದ ಚಂದನ ಸಿಬಿಇಎಸ್ ಶಾಲೆಗೆ ಉತ್ತಮ ಫಲಿತಾಂಶ ಬಂದಿದೆ. ಈ ಬಾರಿ ಶಾಲೆಯು ಶೇ.98ರಷ್ಟು ಫಲಿತಾಂಶ ದಾಖಲಿಸಿದೆ.

ಇಬ್ಬರು ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದು, ಉಳಿದ ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾಗಿ ಶಾಲೆಗೆ ಕೀರ್ತಿ ತಂದಿದ್ದಾರೆ.

ಮಕ್ಕಳ ಸಾಧನೆಗೆ ಸಂಸ್ಥೆಯ ಸಂಸ್ಥಾಪಕ ಟಿ. ಈಶ್ವರ, ನಿರ್ದೇಶಕ ಎಚ್.ಸಿ. ರಟಗೇರಿ, ಮುಖ್ಯೋಪಾಧ್ಯಾಯರು, ಶಿಕ್ಷಕರು, ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

# ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯಮಟ್ಟದ ಕ್ರೀಡಾಕೂಟ ಮೇ.18ರಿಂದ

■ **ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ನೇತೃತ್ವದಲ್ಲಿ ರಾಜ್ಯ ಸರಕಾರಿ ನೌಕರರ ರಾಜ್ಯ ಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಮೇ 18ರಿಂದ 20ರವರೆಗೆ 3 ದಿನಗಳ ಕಾಲ ಶಿವಮೊಗ್ಗದಲ್ಲಿ ಏರ್ಪಡಿಸಲಾಗಿದೆ ಎಂದು ಗದಗ ಜಿಲ್ಲಾ ಸರಕಾರಿ ನೌಕರ ಸಂಘದ ಅಧ್ಯಕ್ಷ ಹಾಗೂ ಗದಗ ತಾಲೂಕು ಓಬಿಸಿ ಅಧಿಕಾರಿ ಡಾ. ಬಸವರಾಜ ಬಳ್ಳಾರಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವವರು, ಸರಕಾರಿ ನೌಕರರು ಒತ್ತಡದಲ್ಲಿ ಕರ್ತವ್ಯ ನಿರ್ವಹಿಸುತ್ತಾರೆ. ಅವರಲ್ಲಿ ಉತ್ಸಾಹ ಮತ್ತು ಉಲ್ಲಾಸ ಇಮ್ಮಡಿಗೊಳಿಸಿ ಅವರಲ್ಲಿರುವ ಪ್ರತಿಭೆ ಗುರುತಿಸಿ ಪೋಷಿಸುವ ಉದ್ದೇಶದಿಂದ ರಾಜ್ಯ ಸರಕಾರಿ ನೌಕರರ ಸಂಘ ರಾಜ್ಯ ಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಸಂಘಟಿಸುತ್ತಿದ್ದು, ಈ ಬಾರಿಯ ರಾಜ್ಯ ಮಟ್ಟದ ಕ್ರೀಡಾಕೂಟಗಳು ಶಿವಮೊಗ್ಗ ಜಿಲ್ಲೆಯ ನೆಹರು ಕ್ರೀಡಾಂಗಣದಲ್ಲಿ ನಡೆಯಲಿವೆ.

ಗದಗ ಜಿಲ್ಲೆಯಿಂದ ರಾಜ್ಯ ಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಆಯ್ಕೆಯಾಗಿರುವ ಕ್ರೀಡಾಳುಗಳು ರಾಜ್ಯ ಮಟ್ಟದಲ್ಲಿ ಉತ್ತಮ ಪ್ರದರ್ಶನ ನೀಡುವ ಮೂಲಕ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿ ಗದಗ ಜಿಲ್ಲೆ ಹಾಗೂ ರಾಜ್ಯದ ಕೀರ್ತಿ ಪತಾಕೆಯನ್ನು ಹಾರಿಸಬೇಕೆಂದು ಡಾ. ಬಸವರಾಜ ಬಳ್ಳಾರಿ ಕರೆ ನೀಡಿದ್ದಾರೆ.

# ಅನುದಾನ ಒದಗಿಸಲು ಮುಖ್ಯಮಂತ್ರಿಗಳಿಗೆ ಮನವಿ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಶಿರಹಟ್ಟಿ ಮತಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಅವರು ಬುಧವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಕ್ಷೇತ್ರದ ಅಭಿವೃದ್ಧಿಯ ದೃಷ್ಟಿಯಿಂದ ಕಾಮಗಾರಿಗಳನ್ನು ಕೈಗೊಳ್ಳಲು ವಿಶೇಷ ಅನುದಾನವನ್ನು ಮಂಜೂರು ಮಾಡುವಂತೆ ಮನವಿ ಮಾಡಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಮಟ್ಟದ ದಿಶಾ ಸಮಿತಿ ಸಭೆಯಲ್ಲಿ ದಿಶಾ ಸಮಿತಿ ಸದಸ್ಯರಾಗಿರುವ ಶಾಸಕ ಡಾ. ಚಂದ್ರು ಲಮಾಣಿ ಅವರು ಸಭೆಯಲ್ಲಿ ಪಾಲ್ಗೊಂಡಿದ್ದರು. ಸಭೆಯ ನಂತರ ಶಾಸಕರು ಮುಖ್ಯಮಂತ್ರಿಗಳ ಬಳಿ ತೆರಳಿ ಕ್ಷೇತ್ರದ ಬಗ್ಗೆ ಮಾಹಿತಿ ನೀಡಿದರು. ಅಲ್ಲದೆ ಕ್ಷೇತ್ರದಲ್ಲಿ ಆಗಬೇಕಾಗಿರುವ ಅಭಿವೃದ್ಧಿ ಕಾರ್ಯಗಳ ಬಗ್ಗೆ ವಿವರಿಸಿ, ಕ್ಷೇತ್ರದ ಜನರ ಹಿತದೃಷ್ಟಿಯಿಂದ ಅಭಿವೃದ್ಧಿ ಕಾರ್ಯಗಳಿಗೆ ವಿಶೇಷ ಅನುದಾನವನ್ನು ಬಿಡುಗಡೆ ಮಾಡುವಂತೆ ವಿನಂತಿಸಿಕೊಂಡರು. ಶಾಸಕರ ಅಹವಾಲನ್ನು ಆಲಿಸಿದ ಸಿದ್ದರಾಮಯ್ಯನವರು, ಅಗತ್ಯವಿರುವ ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳುತ್ತೇನೆ ಎಂದು ಭರವಸೆ ನೀಡಿದರು.

# ರಾಜಸ್ತಾನದಿಂದ ಬಂಗಾಳಿ ಮುಸ್ಲಿಮರ ಗಡಿಪಾರು!

■ **ವಿಜಯಸಾಕ್ಷಿ ಸುದ್ದಿ, ಗದಗ**

ಗುಜರಾತಿನಿಂದ 148 ಬಂಗಾಳಿ ಮಾತನಾಡುವ ಮುಸ್ಲಿಮರನ್ನು ಬಲವಂತವಾಗಿ ಹೊರದಬ್ಬಿರುವುದನ್ನು ರಾಜಸ್ಥಾನದ ಪೀಪಲ್ಸ್ ಯೂನಿಯನ್ ಫಾರ್ ಸಿವಿಲ್ ಲಿಬರ್ಟೀಸ್ (ಪಿಯುಸಿಎಲ್) ಗುರುವಾರದಂದು ಖಂಡಿಸಿದೆ. ಈ ಕಾರ್ಯಾಚರಣೆಯನ್ನು ಸಾಂವಿಧಾನಿಕ ಮತ್ತು ಅಂತರರಾಷ್ಟ್ರೀಯ ಕಾನೂನಿನ ಉಲ್ಲಂಘನೆ ಎಂದು ಕರೆದಿದೆ.

ಈ ಗಡಿಪಾರು ಮಾಡಿದ ವ್ಯಕ್ತಿಗಳನ್ನು "ಬಾಂಗ್ಲಾದೇಶಿ ನಾಗರಿಕರು" ಎಂದು ತಪ್ಪಾಗಿ ಬ್ರಾಂಡ್ ಮಾಡಲಾಗಿದೆ ಮತ್ತು ಸರಿಯಾದ ಕಾನೂನು ಪ್ರಕ್ರಿಯೆಯಿಲ್ಲದೆ ಗಡಿಪಾರು ಮಾಡಲು ಭಾರತ–ಬಾಂಗ್ಲಾದೇಶ ಗಡಿಗೆ ಬಲವಂತವಾಗಿ ನೂಕಲಾಗಿದೆ ಎಂದು ಗುಂಪು ಆರೋಪಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka